MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

YUVA MARGA KANNADA DAILY NEWS PAPER

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 04 | ಸಂಚಿಕೆ: 260 | ಗುರುವಾರ : 31-07-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 04 | ISSUE: 260 | THURSDAY : 31-07-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ರಕ್ತ ನೀರು ಒಟ್ಟಿಗೆ ಹರಿಯಲ್ಲ

**ನವದೆಹಲಿ,ಜು.30–** ರಕ್ತ ಮತ್ತು ನೀರು ಒಟ್ಟಿಗೆ ಹರಿಯುವುದಿಲ್ಲ ಎಂದು ಈಗಾಗಲೇ ಪ್ರಧಾನಿ ನರೇಂದ್ರ ಮೋದಿ ಅವರು ಸ್ಪಷ್ಟಪಡಿಸಿದ್ದು ಅದರಂತೆ ಪಾಕಿಸ್ತಾನ ಭಯೋತ್ಪಾದನೆಗೆ ಬೆಂಬಲ ನೀಡುವುದನ್ನು ನಿಲ್ಲಿಸುವ ತನಕ ಸಿಂಧೂ ಜಲ ಒಪ್ಪಂದ ಸ್ಥಗಿತಗೊಳಿಸಲಾಗುವುದು ಎಂದು ವಿದೇಶಾಂಗ ವ್ಯವಹಾರಗಳ ಸಚಿವ ಡಾ. ಎಸ್. ಜೈಶಂಕರ್ ರಾಜ್ಯಸಭೆಯಲ್ಲಿಂದು ಹೇಳಿದ್ದಾರೆ.

ಪಾಕಿಸ್ತಾನ ಭಯೋತ್ಪಾದನೆಗೆ ಬೆಂಬಲ ನೀಡುವುದನ್ನು ನಿಲ್ಲಿಸುವವರೆಗೆ ಸಿಂಧೂ ಜಲ ಒಪ್ಪಂದ ಸ್ಥಗಿತಗೊಳಿಸಲಾಗುವುದು. ನೀರು ಮತ್ತು ರಕ್ತ ಎರಡೂ ಏಕಕಾಲದಲ್ಲಿ ನಡೆಯುವುದಿಲ್ಲ ಅದೇ ರೀತಿ ಭಯೋತ್ಪಾದನೆ ಮತ್ತು ಮಾತುಕತೆಯೂ ಕೂಡ ಎಂದು ಪಾಕಿಸ್ತಾನಕ್ಕೆ ಖಡಕ್ ಎಚ್ಚರಿಕೆ ನೀಡಿದ್ದಾರೆ.

ರಾಜ್ಯಸಭೆಯಲ್ಲಿ ಆಪರೇಷನ್ ಸಿಂಧೂರ್ ಕುರಿತ ವಿಶೇಷ ಚರ್ಚೆಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು "ಸಿಂಧೂ ಜಲ ಒಪ್ಪಂದವು ಹಲವು ವಿಧಗಳಲ್ಲಿ ಬಹಳ ವಿಶಿಷ್ಟವಾದ ಒಪ್ಪಂದವಾಗಿದೆ. ದೇಶ ತನ್ನ ಪ್ರಮುಖ ನದಿಗಳನ್ನು ಆ ನದಿಯ ಮೇಲೆ ಹಕ್ಕುಗಳಿಲ್ಲದೆ ಮುಂದಿನ ದೇಶಕ್ಕೆ ಹರಿಯಲು ಅನುಮತಿಸಿದ ಯಾವುದೇ ಒಪ್ಪಂದವನ್ನು ನೆನಪಿಸಿಕೊಳ್ಳಲು ಸಾಧ್ಯವಿಲ್ಲ ಎಂದಿದ್ದಾರೆ.

ಭಾರತ 1947 ರಿಂದ ಗಡೀಯಾಚೆಗಿನ ಭಯೋತ್ಪಾದನೆಯನ್ನು **(2ನೇಪುಟಕ್ಕೆ)**

## ಕೃಷ್ಣಾ ನದಿಗೆ 1.40ಲಕ್ಷ ಕ್ಯೂಸೆಕ್ ನೀರು



**ಯುವ ಮಾರ್ಗ ಸುದ್ದಿ**

**ಲಿಂಗಸುಗೂರು,ಜು.30–**ತಾಲ್ಲೂಕಿನ ಬಸವಸಾಗರ ಜಲಾಶಯದಿಂದ ಕೃಷ್ಣಾ ನದಿಗೆ 1,45,750 ಕ್ಯೂಸೆಕ್ ನೀರನ್ನು ಬುಧವಾರ ಸಂಜೆ ಹರಿಬಿಡಲಾಗಿದೆ. ಜಲಾಶಯಕ್ಕೆ 1.40 ಲಕ್ಷ ಕ್ಯೂಸೆಕ್ ನೀರು ಆಲಮಟ್ಟಿ ಅಣೆಕಟ್ಟೆಯಿಂದ ಒಳಹರಿವಾಗಿ ಬರುತ್ತಿದ್ದು, ಸಂಜೆ ಬಂದ ನೀರನ್ನು ಗರಿಷ್ಠ ಪ್ರಮಾಣದಲ್ಲಿ ಸಂಗ್ರಹಿಸಿಟ್ಟುಕೊಂಡು ಹೆಚ್ಚುವರಿ ನೀರನ್ನು 25 ಕ್ರಸ್ಟ್ ಗೇಟುಗಳ ಮೂಲಕ ನದಿಗೆ ಬಿಡಲಾಗುತ್ತಿದೆ.

33.313 ಟಿಎಂಸಿ ನೀರು ಸಂಗ್ರಹ ಸಾಮರ್ಥ್ಯದ ಜಲಾಶಯದಲ್ಲಿ ಮಂಗಳವಾರ ಸಂಜೆ 28.779 ಟಿಎಂಸಿ ನೀರು ಸಂಗ್ರಹವಾಗಿದೆ. ಇದು ಜಲಾಶಯ ಸಂಗ್ರಹದ ಶೇ. 86.39 ರಷ್ಟಿದೆ.

## ಶಾಲಾ ಸಮಯಕ್ಕೆ ಬಸ್ ವ್ಯವಸ್ಥೆ ಮಾಡಲು ಕರವೇ ಆಗ್ರಹ



**ಯುವ ಮಾರ್ಗ ಸುದ್ದಿ**

**ಲಿಂಗಸುಗೂರು,ಜು.30–** ತಾಲೂಕಿನ ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳಿಗೆ ಶಾಲಾ ಕಾಲೇಜು ಸಮಯಕ್ಕೆ ಸರಿಯಾಗಿ ಸಾರಿಗೆ ವ್ಯವಸ್ಥೆ ಮಾಡುವಂತೆ ನಮ್ಮ ಕರ್ನಾಟಕ ರಕ್ಷಣಾ ವೇದಿಕೆ ಕಾರ್ಯಕರ್ತರು ಸಹಾಯಕ ಆಯುಕ್ತ ಬಸವಣ್ಣೆಪ್ಪ ಕಲಶೆಟ್ಟಿಯವರಿಗೆ ಬುಧವಾರ ಮನವಿ ಸಲ್ಲಿಸಿ ಆಗ್ರಹಿಸಿದರು.

ಲಿಂಗಸುಗೂರು ಘಟಕದ ಬೆಂಗಳೂರು–ಸಜ್ಜಲಗುಡ್ಡ ಬಸ್ ಸಜ್ಜಲಗುಡ್ಡದಿಂದ ಅಂಕನಾಳ, ಹಲ್ಕಾವಟಗಿವರೆಗೆ ಮುಂದುವರೆಸಬೇಕು. ಇದರಿಂದ ವಿದ್ಯಾರ್ಥಿಗಳಿಗೆ ಸಕಾಲಕ್ಕೆ ಶಾಲಾ ಕಾಲೇಜು ತಲುಪಲು ಅನುಕೂಲವಾಗುತ್ತದೆ. ಕೂಡಲೇ ಈ ಬಗ್ಗೆ ಪರಿಶೀಲಿಸಿ ಸಾರಿಗೆ ಅಧಿಕಾರಿಗಳಿಗೆ ತಾಕೀತು ಮಾಡಬೇಕು. ವಾರದಲ್ಲಿ ರೂಟ್ ಸರಿಮಾಡದೇ ಇದ್ದಲ್ಲಿ ಸಂಘಟನೆಯಿಂದ ಹೋರಾಟಕ್ಕೆ ಇಳಿಯುವುದಾಗಿ ಮನವಿಯಲ್ಲಿ ತಿಳಿಸಿದ್ದಾರೆ.

ಈ ಸಂದರ್ಭದಲ್ಲಿ ಸಂಘಟನೆ ಅಧ್ಯಕ್ಷ ತಿಮ್ಮಾರೆಡ್ಡಿ ಮುನ್ನೂರು, ಮಹಿಳಾ ಘಟಕದ ಅಧ್ಯಕ್ಷೆ ಲಕ್ಷ್ಮೀ ಕುಂಬಾರ ಅಂಕನಾಳ, ರಮೇಶ ಗುತ್ತೇದಾರ, ಮೌನೇಶ ರೆಡ್ಡಿ, ಬಸವರಾಜ ಕಕ್ಕೇರ, ಅಶೋಕ ಗಸ್ತಿ, ಯಲ್ಲಪ್ಪ ಬಂಡಿ, ದೇವರಾಜ ಉಪ್ಪಾರ, ಶ್ರೀಶೈಲ ಸೇರಿ ಇತರರು ಇದ್ದರು.

## ಪ್ರತಿಫಲನ ಬರಹ ಅಂತರಂಗದಲ್ಲಿ ಉದಯಿಸಬೇಕು : ಮಂಡಲಗಿರಿ ಪ್ರಸನ್ನ

**ಯುವ ಮಾರ್ಗ ಸುದ್ದಿ**

**ಮಾನ್ವಿ,ಜು.30–**ಬರಹಗಾರ ಸೂಕ್ಷ್ಮ ಸಂವೇದನೆಯಿಂದ ಪ್ರತಿ ವಿಷಯ, ಸನ್ನಿವೇಶ ಮತ್ತು ದೃಶ್ಯವನ್ನು ಅವಲೋಕಿಸಿ ಅದರ ಒಳಹೊರಹುಗಳನ್ನು ಸರಿಯಾಗಿ ಅರ್ಥೈಸಿಕೊಂಡಾಗ ಆ ವಿಷಯ, ಸನ್ನಿವೇಶ ಮತ್ತು ದೃಶ್ಯದ ಕುರಿತು ಬರಹಗಾರನ ಅಂತರಂಗದಲ್ಲಿ ಪ್ರತಿಫಲನ ಉದಯಿಸಲು ಸಾಧ್ಯ ಎಂದು ಹಿರಿಯ ಸಾಹಿತಿ ಮತ್ತು ವಿಮರ್ಶಕ ಮಂಡಲಗಿರಿ ಪ್ರಸನ್ನ ಹೇಳಿದರು.

ಬುಧವಾರ ಪಟ್ಟಣದ ಶಾರದಾ ಶಿಕ್ಷಣ ಸಂಸ್ಥೆಯ ಶಾರದಾ ವಿದ್ಯಾನಿಕೇತನ ಶಿಕ್ಷಣ ಮಹಾವಿದ್ಯಾಲಯದಲ್ಲಿ ಆಯೋಜಿಸಿದ್ದ "ಪ್ರತಿಫಲಿತ ಓದು ಮತ್ತು ಬರಹ" ವಿಷಯ ಕುರಿತ ಕಾರ್ಯಗಾರದಲ್ಲಿ ಉಪನ್ಯಾಸ ನೀಡುತ್ತ ಹಲವಾರು ದಿನಪತ್ರಿಕೆಗಳು, ವಾರ ಪತ್ರಿಕೆಗಳು, ಮಾಸ ಪತ್ರಿಕೆಗಳು ಮುಂತಾದ ಪತ್ರಿಕೆಗಳಲ್ಲಿ ಪ್ರಕಟವಾಗುವ ಲೇಖನಗಳು ಮತ್ತು ವರದಿಗಳು ಬರಹಗಾರನ ಓದುಗಾರಿಕೆಯಿಂದ ಅಥವಾ ಯಾವುದೋ ಸನ್ನಿವೇಶವನ್ನು ಅವಲೋಕಿಸಿ ಅದರಲ್ಲಿನ ನೋವು –ನಲಿವುಗಳನ್ನು ತನ್ನದೆಂದು ಭಾವಿಸಿಕೊಂಡು ಯಾವುದೋ ತುಡಿತದಿಂದ ಲೇಖನ ಇಲ್ಲವೇ ವರದಿ ಮಾಡಿರುತ್ತಾರೆ. ಅದರಂತೆ ಬರಹಗಾರರಾದವರು ತಮ್ಮ ಮುಂದಿರುವ ವಿಷಯ, ದೃಶ್ಯ ಮತ್ತು ಸನ್ನಿವೇಶಗಳನ್ನು ಸೂಕ್ಷ್ಮವಾಗಿ ಗಮನಿಸಿ ಅದರಲ್ಲಿನ ವಿಶೇಷ ಅಂಶಗಳನ್ನು ಒಳಗೊಂಡಂತೆ ಪ್ರತಿಫಲಿತ ಲೇಖನ ತಯಾರಿಸಬಹುದೆಂದರು.




ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ವಿಷಯ ಮಾರ್ಗದರ್ಶಕರು ಮತ್ತು ಪ್ರಾಂಶುಪಾಲರಾದ ಡಾ. ತಿಮ್ಮಯ್ಯ ಶೆಟ್ಟಿ ಇಲ್ಲೂರು ಮಾತನಾಡಿ ಪ್ರತಿಫಲಿತ ಲೇಖನ ತಯಾರಿಸುವದು ಶಿಕ್ಷಕರಿಗೆ ಬಹು ಉಪಯುಕ್ತವಾಗಿದ್ದು ನಿಮಗೆ ನೀಡಿದ ಚಟುವಟಿಕೆಗಳಿಗೆ ಸಂಬಂಧಿಸಿದಂತೆ ವಿವಿಧ ಪರಿಕಲ್ಪನೆಗಳನ್ನು ಆಯ್ಕೆ ಮಾಡಿಕೊಂಡು ಅದಕ್ಕೆ ಸೂಕ್ತ ಪ್ರತಿಫಲಿತ ಲೇಖನ, ಪಠ್ಯವನ್ನು ಸಂಭಾಷಣೆಯಾಗಿ ಪರಿವರ್ತಿಸುವುದು ಮತ್ತು ದೃಶ್ಯವನ್ನು ಅವಲೋಕಿಸಿ ಅದರ ಕುರಿತು ಲೇಖನ ಬರವಣಿಗೆ ಮುಂತಾದವುಗಳಲ್ಲಿ ನಿಮ್ಮನ್ನು ನೀವು ತೊಡಗಿಸಿಕೊಂಡರೆ ನಿಮ್ಮೊಳಗಿನ ಬರಹಗಾರ ಪುಟಿದೇಳುತ್ತಾನೆ. ಆದ್ದರಿಂದ ಸರಿಯಾದ ಮಾರ್ಗದರ್ಶನದೊಂದಿಗೆ ಕಾರ್ಯಪ್ರವೃತ್ತರಾಗಲು ತಿಳಿಸಿದರು.

ಕಾರ್ಯಕ್ರಮದಲ್ಲಿ ಮಹಾವಿದ್ಯಾಲಯದ ಉಪನ್ಯಾಸಕರು ಮತ್ತು ಪ್ರಶಿಕ್ಷಣಾರ್ಥಿಗಳು ಭಾಗವಹಿಸಿದ್ದರು. ಪ್ರಶಿಕ್ಷಣಾರ್ಥಿ ಆರೀಫ್ ನಿರೂಪಿಸಿ ಸ್ವಾಗತಿಸಿದರು, ಲಕ್ಷ್ಮೀ ವಂದಿಸಿದರು.

## ಶ್ರೀನುಲಿಯ ಚಂದಯ್ಯ ಜಯಂತಿ ಅರ್ಥಪೂರ್ಣ ಆಚರಣೆಯಾಗಲಿ: ಅಪರ ಜಿಲ್ಲಾಧಿಕಾರಿ ಶಿವಾನಂದ ಸೂಚನೆ

**ಯುವ ಮಾರ್ಗ ಸುದ್ದಿ**

**ರಾಯಚೂರು,ಜು.30–** ಜಿಲ್ಲಾಡಳಿತದಿಂದ ಆಗಸ್ಟ್ 9ರಂದು ಶ್ರೀನುಲಿಯ ಚಂದಯ್ಯ ಅವರ ಜಯಂತ್ಯುತ್ಸವವನ್ನು ಅರ್ಥಪೂರ್ಣವಾಗಿ ಆಚರಿಸಲು ಅಗತ್ಯ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಬುಧವಾರ ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಶ್ರೀನುಲಿಯ ಚಂದಯ್ಯ ಜಯಂತ್ಯುತ್ಸವ ಅಂಗವಾಗಿ ಪೂರ್ವಭಾವಿ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.



ಅಂದು ಬೆಳಿಗ್ಗೆ 9 ಗಂಟೆಗೆ ನಗರದ ಟಿಪ್ಪು ಸುಲ್ತಾನ ಸರ್ಕಲ್‌ನಿಂದ ರಂಗಮಂದಿರವರೆಗೂ ನಡೆಯಲಿರುವ ಮೆರವಣಿಗೆಯಲ್ಲಿ ಅತ್ಯುತ್ತಮ ಕಲಾ ಪ್ರದರ್ಶನ ನೀಡುವ ತಂಡಗಳನ್ನು ನಿಯೋಜಿಸಬೇಕು. ಅಂದು ಬೆಳಿಗ್ಗೆ 10.30ಕ್ಕೆ ನಗರದ ಪಂಡಿತ ಸಿದ್ದರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ನಡೆಯುವ ವೇದಿಕೆ ಕಾರ್ಯಕ್ರಮಕ್ಕೆ ಮತ್ತು ಶ್ರೀನುಲಿಯ ಚಂದಯ್ಯ ಅವರ ಬಗ್ಗೆ ಉಪನ್ಯಾಸ ಹಾಗೂ ಇನ್ನಿತರ ವ್ಯವಸ್ಥೆಗೆ ಅಗತ್ಯ ಸಿದ್ಧತೆ ಮಾಡುವಂತೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಅಧಿಕಾರಿಗಳಿಗೆ ಅಪರ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಶ್ರೀನುಲಿಯ ಚಂದಯ್ಯ ಜಯಂತಿ ಕಾರ್ಯಕ್ರಮವನ್ನು ಜಿಲ್ಲೆಯ ಎಲ್ಲ ತಾಲೂಕುಗಳಲ್ಲಿಯೂ ಕಡ್ಡಾಯ ಆಚರಿಸಿ ಅವರ ವಚನಾಮೃತದ ಸಾರವನ್ನು ಸಾರ್ವಜನಿಕರಿಗೆ ತಿಳಿಸಲು ಸಂಬಂಧಿಸಿದ ಅಧಿಕಾರಿಗಳು ಸೂಕ್ತ ಕ್ರಮವಹಿಸಬೇಕು.ಅಲ್ಲದೆ**(2ನೇಪುಟಕ್ಕೆ)**

## ಮಾನ್ವಿ: ಸಿಇಓ ಭೇಟಿ ಜೆಜೆಎಂ ಮತ್ತು ಜಲಧಾರೆ ಕಾಮಗಾರಿಗಳ ಪರಿಶೀಲನೆ

**ಯುವ ಮಾರ್ಗ ಸುದ್ದಿ**

**ಮಾನ್ವಿ,ಜು.30–** ರಾಯಚೂರು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ್ ಕಂದೂ ಅವರು ಮಾನ್ವಿ ತಾಲೂಕಿನ ಗೋರ್ಕಲ್, ಕಪಗಲ್ ಮತ್ತು ನೀರಮಾನ್ವಿ ಗ್ರಾಮ ಪಂಚಾಯತಿಗಳಿಗೆ ಭೇಟಿ ನೀಡಿ ಜಲ ಜೀವನ್ ಮಿಷನ್ (ಜೆಜೆಎಂ) ಮತ್ತು ಜಲಧಾರೆ ಕಾಮಗಾರಿಗಳ ಪ್ರಗತಿಯನ್ನು ಪರಿಶೀಲಿಸಿದರು.



**ಗೋರ್ಕಲ್ ಗ್ರಾಮ ಪಂಚಾಯತಿ ಭೇಟಿ: ಬಹುಗ್ರಾಮ ಕುಡಿಯುವ ನೀರಿನ ಕೆರೆ ಪರಿಶೀಲನೆ**

ಸಿಇಓ ಅವರು ಗೋರ್ಕಲ್ ಗ್ರಾಮ ಪಂಚಾಯತಿ ವ್ಯಾಪ್ತಿಯ ಗೋರ್ಕಲ್ ಗ್ರಾಮದಲ್ಲಿ 8 ಎಕರೆ 13 ಗುಂಟೆಯಲ್ಲಿ ನಿರ್ಮಿಸಲಾಗಿರುವ ಬಹುಗ್ರಾಮ ಕುಡಿಯುವ ನೀರಿನ ಕೆರೆಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಈ ಕೆರೆಯು 34 ಕಿಲೋಮೀಟರ್ ವ್ಯಾಪ್ತಿಯಲ್ಲಿ ಬರುವ 8 ಹಳ್ಳಿಗಳ 33,900 ಜನಸಂಖ್ಯೆಗೆ ಕುಡಿಯುವ ನೀರನ್ನು ಒದಗಿಸುತ್ತದೆ ಎಂಬ ಮಾಹಿತಿ ಪಡೆದರು. ಕೆರೆಯ ನೀರಿನ ಶುದ್ಧೀಕರಣದ ಬಗ್ಗೆ ಪರಿಶೀಲನೆ ನಡೆಸಿದ ಸಿಇಓ, ಎರಡು ಬಾಟಲಿಗಳಲ್ಲಿ ಶುದ್ಧೀಕರಿಸಿದ ನೀರಿನ ಮಾದರಿಗಳನ್ನು ಪರೀಕ್ಷಿಸಿ ವರದಿ ಸಲ್ಲಿಸಲು ಸೂಚಿಸಿದರು. ಅಲ್ಲದೆ, ಪ್ರತಿ ಹದಿನೈದು ದಿನಗಳಿಗೊಮ್ಮೆ ನೀರನ್ನು ಪರೀಕ್ಷೆಗೆ ಒಳಪಡಿಸಿ ಗ್ರಾಮಸ್ಥರಿಗೆ ಸರಬರಾಜು ಮಾಡುವಂತೆ ಸೂಚನೆ ನೀಡಿದರು.

**ಕಪಗಲ್ ಗ್ರಾಮದಲ್ಲಿ ಜೆಜೆಎಂ ಯೋಜನೆ ಪರಿಶೀಲನೆ**

ನಂತರ ಸಿಇಓ ಅವರು ಕಪಗಲ್ ಗ್ರಾಮದಲ್ಲಿ ಜೆಜೆಎಂ ಯೋಜನೆಯಡಿ ನಿರ್ಮಿಸಲಾದ ಕುಡಿಯುವ ನೀರಿನ ನಳಗಳನ್ನು ಪರಿಶೀಲಿಸಿದರು. ಸಿಸಿ ರಸ್ತೆ ಪಕ್ಕದಲ್ಲಿ ಅಗೆದ ಗುಂಡಿಗಳನ್ನು ಮುಚ್ಚುವಂತೆ ಸೂಚಿಸಿದ ಅವರು, ಕಾಮಗಾರಿ ವಿಳಂಬಕ್ಕೆ ಕಾರಣ ಕೇಳಿದರು. ಒಂದು ವಾರದೊಳಗೆ ಕಾಮಗಾರಿ ಪೂರ್ಣಗೊಳಿಸದಿದ್ದರೆ ಗುತ್ತಿಗೆದಾರರ ವಿರುದ್ಧ ಕ್ರಮ ಕೈಗೊಳ್ಳುವುದಾಗಿ ಎಚ್ಚರಿಕೆ ನೀಡಿದರು.

**ನೀರಮಾನ್ವಿ ಗ್ರಾಮ ಪಂಚಾಯತಿ: ಜಲಧಾರೆ ಯೋಜನೆ ಮತ್ತು ಅಂಗನವಾಡಿ ಪರಿಶೀಲನೆ**

ನೀರಮಾನ್ವಿ ಗ್ರಾಮ ಪಂಚಾಯತಿ ವ್ಯಾಪ್ತಿಯ ಕೋಳಿ ಕ್ಯಾಂಪಿನಲ್ಲಿರುವ ಜಲಧಾರೆ ಯೋಜನೆಯಡಿ ನಿರ್ಮಿಸಲಾದ ನೀರಿನ ಟ್ಯಾಂಕ್ ಅನ್ನು ಸಿಇಓ ಪರಿಶೀಲಿಸಿದರು. ಈ ಟ್ಯಾಂಕ್‌ನಿಂದ ಎಷ್ಟು ಜನರಿಗೆ ಪ್ರಯೋಜನವಾಗುತ್ತದೆ ಮತ್ತು**(2ನೇಪುಟಕ್ಕೆ)**

## ಸಹಕಾರ ಸಂಘಗಳ ಸಮಾಪನೆಗೊಳಿಸಲು ಆಕ್ಷೇಪಣೆಗೆ ಅರ್ಜಿ ಆಹ್ವಾನ

**ರಾಯಚೂರು,ಜು.30–**ರಾಯಚೂರು ಉಪ ವಿಭಾಗದ ಸಹಕಾರ ಸಂಘಗಳು ಸ್ಥಗಿತಗೊಂಡಿದ್ದು, ಇವುಗಳನ್ನು ಸಮಾಪ ನೆಗೊಳಿಸಲು ಸದಸ್ಯರಿಂದ ಅಥವಾ ಸಾ ರ್ವಜನಿಕರಿಂದ ಆಕ್ಷೇಪಣೆಗೆ ಅರ್ಜಿ ಆಹ್ವಾನಿಸಲಾಗಿದೆ.ಉಪ ವಿಭಾಗದ ವ್ಯಾಪ್ತಿಯಲ್ಲಿ ಬರುವ ಸಹಕಾರ ಸಂಘಗಳು, ಹಲವು ವರ್ಷಗಳಿಂದ ಸಂಘದ ಉದ್ದೇ ಶಿತ ಕಾರ್ಯ ನಿರ್ವಹಿಸದೇ ಸ್ಥಗಿತ ಗೊಂಡಿರುವುದರಿಂದ ಸಂಘಗಳ ನ್ನು ಸಮಾಪನೆಗೊಳಿಸಬೇಕಿದೆ. ಈ ಸಂಘಗಳ ನ್ನು ಸಮಾಪನೆಗೊಳಿಸಲು ಸದಸ್ಯರಿಂದ ಅಥವಾ ಸಾರ್ವಜನಿಕರಿಂದ ಯಾವುದೇ ಆಕ್ಷೇಪಣೆಗಳಿದ್ದಲ್ಲಿ ಅದನ್ನು ಸಮರ್ಥಿಸುವ ದಾಖಲೆಗಳ ಸಹಿತವಾಗಿ ಈ ನೋಟೀಸು ಪ್ರಕಟಗೊಂಡ ಹದಿನೈದು (15) ದಿನಗಳೊಳಗಾಗಿ ಸಹಕಾರ ಸಂಘ ಗಳ ಸಂಬಂ ಧಪಟ್ಟ ಸಹಕಾರ ಸಂಘ ಗಳ ಸಹಾಯಕ ನಿಬಂಧಕರು ರಾಯಚೂರು ಇವರಿಗೆ ಸಲ್ಲಿಸಬಹುದಾಗಿದೆ. ನಿಗದಿತ ಕಾಲಾವಧಿ ಯಲ್ಲಿ ಯಾವುದೇ ಆಕ್ಷೇಪಣೆ ಮತ್ತು ಅದನ್ನು ಸಮರ್ಥಿಸುವ ದಾಖಲೆಗಳ ಸಹಿ ತ ಸಲ್ಲಿಸದಿದ್ದಲ್ಲಿ ಯಾವು ದೇ ಆಕ್ಷೇಪಣೆ ಇಲ್ಲ ಎಂದು ಪರಿಗಣಿಸಿ ಸ್ಥಗಿತ ಸಹಕಾರ ಸಂಘಗಳ ಸಮಾಪನೆಗಾಗಿ ಕ್ರಮವಹಿಸ ಲಾಗುವುದು.

**ಸ್ಥಗಿತವಾದ ಸಹಕಾರ ಸಂಘಗಳ ವಿವರ:** ರಾಯಚೂರು ಸಹಕಾರ ಇಲಾಖೆ ನೌಕ ರರ ಪತ್ತಿನ ಸಹಕಾರ ಸಂಘ ನಿ, ರಾಯ ಚೂರು ನೋಂದಣಿ ಸಂಖ್ಯೆ:250 ದಿನಾಂಕ:01-09-1965., ಚಲುವಾದಿ ನೌಕರರ ಪತ್ತಿನ ಸಹಕಾರ ಸಂಘ ನಿ, ರಾಯಚೂರು ನೋಂದಣಿ ಸಂಖ್ಯೆ:25517 ದಿನಾಂಕ:23-03-2010., ಎಣ್ಣೆ ಬೀಜ ಬೆಳೆಗಾರರ ಸಹಕಾರ ಸಂಘ ನಿ, ಮಟಮಾರಿ ನೋಂ ದಣಿ ಸಂಖ್ಯೆ:9780 ದಿನಾಂಕ:10-10-1983., ಎಣ್ಣೆ ಬೀಜ ಬೆಳೆಗಾರರ ಸಹ ಕಾರ ಸಂಘ ನಿ, ಉಡಮಗಲ್ ಖಾನಾ ಪೂರು ನೋಂದಣಿ ಸಂಖ್ಯೆ:9798 ದಿನಾಂಕ:31-01-1986., ಶ್ರೀರಾಮನಗರ ಕ್ಯಾಂಪ್ (ಜಾನಕಿರಾಮಯ್ಯ ಕ್ಯಾಂಪ್) ಹಾಲು ಉತ್ಪಾದಕರ ಸಹಕಾರ ಸಂಘ ನಿ, ಶ್ರೀರಮ ನಗರ ಕ್ಯಾಂಪ್ ನೋಂದಣಿ ಸಂಖ್ಯೆ:318 09 ದಿನಾಂಕ:16-02-2006., ಗೋನಾಲ ಹಾಲು ಉತ್ಪಾದಕರ ಸಹಕಾರ ಸಂಘ ನಿ ವಿಜಯನಗರ ಕ್ಯಾಂಪ್ ನೋಂದಣಿ ಸಂಖ್ಯೆ:11919 ದಿನಾಂಕ:02-12-1986., ಹಾಲು ಉತ್ಪಾದಕರ ಸಹಕಾರ ಸಂಘ ನಿ, ಜಯನಗರಕ್ಯಾಂಪ್ ನೋಂದಣಿ ಸಂಖ್ಯೆ:15165 ದಿನಾಂಕ:05-09-1990., ಸೂರ್ಯಬಾಬು ಕ್ಯಾಂಪ್ ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘ ನಿ.ಸೂರ್ಯಬಾಬು ಕ್ಯಾಂಪ್ ನೋಂದಣಿ ಸಂಖ್ಯೆ:31823 ದಿನಾಂಕ:16-10-2006., ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘ ನಿ, ರಾಜಲಬಂಡಾ ನೋಂದಣಿ ಸಂಖ್ಯೆ:49421 ದಿನಾಂಕ:24-06-2020., ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘ ನಿ, ಸೂರ್ಯನಗರ ಕ್ಯಾಂಪ್ ನೋಂದಣಿ ಸಂಖ್ಯೆ:15200 ದಿನಾಂಕ:**(2ನೇಪುಟಕ್ಕೆ)**

## ಮೊದಲನೇಯ ಪುಟದಿಂದ

# ರಕ್ತ ನೀರು ಒಟ್ಟಿಗೆ ಹರಿಯಲ್ಲ

ಎದುರಿಸುತ್ತಿದೆ. ಪಾಕ್‌ನೊಂದಿಗೆ ಸಿಂಧೂ ಜಲ ಒಪ್ಪಂದವನ್ನು ಸ್ಥಗಿತಗೊಳಿಸಿ, ಮೋದಿ ಸರ್ಕಾರ ಜವಹರ್‌ಲಾಲ್ ನೆಹರು ಅವರ ನೀತಿಗಳ ತಪ್ಪುಗಳನ್ನು ಸರಿಪಡಿಸಿದೆ. ನೆಹರು ಅವರು ಪಾಕ್‌ನೊಂದಿಗಿನ ಒಪ್ಪಂದಕ್ಕೆ ಸಹಿ ಹಾಕಿದ್ದು ಶಾಂತಿಗಾಗಿ ಅಲ್ಲ. ಬದಲಿಗೆ ತುಷ್ಟೀಕರಣಕ್ಕಾಗಿ ಎಂದು ಹೇಳಿದರು.

ಪಹಲ್ಗಾಮ್‌ನಲ್ಲಿ ನಡೆದ ಉಗ್ರರ ದಾಳಿಯನ್ನು ತೀವ್ರವಾಗಿ ಖಂಡಿಸಿದ ಅವರು ಹೊಣೆಗಾರಿಕೆ ಮತ್ತು ನ್ಯಾಯ ಇರಬೇಕಿತ್ತು. ಪಾಕ್ ದಾಳಿಗೆ ತಕ್ಕ ಉತ್ತರ ನೀಡಿದ್ದೇವೆ.ಪಾಕಿಸ್ತಾನ ದಾಳಿ ಮಾಡಿದ ಸಂದರ್ಭದಲ್ಲೆಲ್ಲಾ ದಿಟ್ಟ ಉತ್ತರ ನೀಡಿದ್ದೇವೆ. ಭಾರತ ಮಧ್ಯಸ್ಥಿಕೆಗೆ ಮುಕ್ತವಾಗಿಲ್ಲ. ನಾವು ಪರಮಾಣು ಅಸ್ತ್ರದ ಬೆದರಿಕೆಯನ್ನು ಒಪ್ಪುವುದಿಲ್ಲ ಎಂದು ಪಾಕಿಸ್ತಾನಕ್ಕೆ ಎಚ್ಚರಿಕೆ ನೀಡಿದರು. ಭಾರತದ ರಾಜತಾಂತ್ರಿಕತೆಯಿಂದಾಗಿ ಟಿಆರ್‌ಎಫ್‌ಅನ್ನು ಭಯೋತ್ಪಾದಕ ಸಂಘಟನೆ ಎಂದು ಘೋಷಿಸಿದೆ ಎಂದರು.

ಘಟನೆಯ ಇತಿಹಾಸ ನೆನಪಿಸಿಕೊಳ್ಳುವುದು ಮುಖ್ಯವಾಗಿದೆ. ಕೆಲವು ಜನರು ಇತಿಹಾಸದ ಬಗ್ಗೆ ಅನಾನುಕೂಲತೆ ಬಗ್ಗೆ ಅನುಭವ ಹೊಂದಿದ್ದಾರೆ. ಪಾಕಿಸ್ತಾನ ಭಯೋತ್ಪಾದನೆ ನಿಲ್ಲಿಸದೆ ಅದರ ಜೊತೆ ಯಾವುದೇ ಮಾತುಕತೆ ನಡೆಯುವುದಿಲ್ಲ ಎಂದು ಸ್ಪಷ್ಟ ಪಡಿಸಿದ್ದಾರೆ.ಪಹಲ್ಗಾಮ್ ಭಯೋತ್ಪಾದಕ ದಾಳಿಯಕೋರರನ್ನು ಆಪರೇಷನ್ ಮಹಾದೇವ್ ಅಡಿ ಭಾರತೀಯ ಸೇನೆ ಮೊನ್ನೆ ಹತ್ಯೆ ಮಾಡುವ ಮೂಲಕ ಸಂತ್ರಸ್ಥ ಕುಟುಂಬಗಳಿಗೆ ನ್ಯಾಯ ಒದಗಿಸಿವೆ. ಪಾಕಿಸ್ತಾನ ಭಯೋತ್ಪಾದನೆ ನಿಲ್ಲಿಸುವ ತನಕ ಅದರೊಂದಿಗೆ ಯಾವುದೇ ಮಾತುಕತೆಯೂ ನಡೆಯುವುದಲ್ಲ ಎಂದಿದ್ದಾರೆ.

ಕಳೆದ ದಶಕದಲ್ಲಿ, ಭಾರತ ಭಯೋತ್ಪಾದನೆಯನ್ನು ಜಾಗತಿಕ ಕಾರ್ಯಸೂಚಿಯಲ್ಲಿ ಇರಿಸುವಲ್ಲಿ ಯಶಸ್ವಿಯಾಗಿದೆ' ಅದು ಬ್ರಿಕ್ಸ್, ಎಸ್‌ಸಿಒ, ಕ್ವಾಡ್ ಅಥವಾ ದ್ವಿಪಕ್ಷೀಯ ಮಟ್ಟದಲ್ಲಿ ಪಾಕಿಸ್ತಾನದ ಬಣ್ಣವನ್ನು ಬಯಲು ಮಾಡಿದ್ದೇವೆ, ಹೀಗಿದ್ದರೂ ಪಾಕಿಸ್ತಾನ ತಮ್ಮದೇನು ತಪ್ಪಿಲ್ಲ ಎನ್ನುವ ರೀತಿ ವರ್ತಿಸುತ್ತಿದೆ ಎಂದು ವಾಗ್ದಾಳಿ ನಡೆಸಿದರು.

ಪಾಕಿಸ್ತಾನ ನೇರವಾಗಿ ಭಾರತದ ಮೇಲೆ ಯುದ್ಧ ಮಾಡದೆ ಪರೋಕ್ಷವಾಗಿ ಭಯೋತ್ಪಾದಕರ ಮೂಲಕ ಸಮೆ ಸಾರುವ ಕೆಲಸ ಮಾಡುತ್ತಿದೆ. ಪಾಕಿಸ್ತಾನಕ್ಕೆ ಭಾರತ ಸೂಕ್ತ ತಿರುಗೇಟು ನೀಡಲಿದೆ, ಇದನ್ನು ಅರಿತು ತಪ್ಪು ತಿದ್ದಿಕೊಂಡರೆ ಪಾಕಿಸ್ತಾನಕ್ಕೂ ಒಳಿತು ಎಂದಿದ್ದಾರೆ.

## ಶ್ರೀನುಲಿಯ ಚಂದಯ್ಯ ಜಯಂತಿ ಅರ್ಥಪೂರ್ಣ ಆಚರಣೆಯಾಗಲಿ: ಅಪರ ಜಿಲ್ಲಾಧಿಕಾರಿ ಶಿವಾನಂದ ಸೂಚನೆ

ಶಿಷ್ಟಾಚಾರಂತೆ ಆಹ್ವಾನ ಪತ್ರಿಕೆ ಮುದ್ರಿಸಿ ಗಣ್ಯರಿಗೆ ವಿತರಿಸಬೇಕು. ಅಂದು ರಂಗಮಂದಿರದ ಆವರಣದಲ್ಲಿ ಕುಡಿಯುವ ನೀರು ಸೇರಿದಂತೆ ಎಲ್ಲಾ ಅಗತ್ಯ ಏರ್ಪಾಡು ಮಾಡಬೇಕು. ನಗರದ ಮುಖ್ಯ ರಸ್ತೆಗಳು ಮತ್ತು ಆವರಣದಲ್ಲಿ ಶುಚಿತ್ವ ಕಾಯ್ದುಕೊಳ್ಳಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಕಾರ್ಯಕ್ರಮ ಯಶಸ್ಸಿಗೆ ಸಕಲ ಸಿದ್ಧತೆ ಮಾಡಲು ಇಲಾಖಾವಾರು ಅಧಿಕಾರಿಗಳಿಗೆ ಜವಾಬ್ದಾರಿ ಹಂಚಿಕೆ ಮಾಡಲಾಗುವುದು. ಯಾವುದೇ ಲೋಪವಾಗದಂತೆ ಅಧಿಕಾರಿಗಳು ಕಾರ್ಯನಿರ್ವಹಿಸಬೇಕು ಎಂದು ಅಪರ ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು.

ಸಮಾಜದ ಮುಖಂಡರ ಸಲಹೆ: ವೇದಿಕೆ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಆಚರಿಸಬೇಕು. ಜನಪ್ರತಿನಿಧಿಗಳು, ಜಿಲ್ಲಾ ಮಟ್ಟದ ಅಧಿಕಾರಿ, ಸಿಬ್ಬಂದಿ ಕಾರ್ಯಕ್ರಮದಲ್ಲಿ ತಪ್ಪದೇ ಪಾಲ್ಗೊಳ್ಳಬೇಕು. ಶ್ರೀ ನುಲಿಯ ಚಂದಯ್ಯ ಅವರ ವಿಚಾರಧಾರೆಗಳ ಕುರಿತು ಸಂಪನ್ಮೂಲ ವ್ಯಕ್ತಿಗಳಿಂದ ಉಪನ್ಯಾಸ, ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿದ ಸಾಧಕರಿಗೆ ಸನ್ಮಾನ ಹಾಗೂ ಎಸ್ಸೆಸ್ಸೆಲ್ಸಿ, ಪಿಯುಸಿಯಲ್ಲಿ ಅತಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಬೇಕು ಎಂದು ಇದೆ ವೇಳೆ ಸಮಾಜದ ಬಂಧುಗಳು ಮನವಿ ಮಾಡಿದರು.

ಇದೇ ಸಂದರ್ಭದಲ್ಲಿ ಕನ್ನಡ ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಉತ್ತರಾದೇವಿ, ಸಮಾಜದ ಮುಖಂಡರಾದ ನರಸಿಂಹಲು ಕಮಲಪೂರ, ಮಾಲಾ ಎಸ್. ಭಜಂತ್ರಿ, ಆಂಜನೇಯ, ರಾಮಕೃಷ್ಣ ಭಜಂತ್ರಿ, ಗಂಗಣ್ಣ ಕರವೇ, ದುರುಗರಾಜ್, ನಂದಪ್ಪ ಮಡ್ಡಿ ಲಿಂಗದಹಳ್ಳಿ, ಬೂದೆಪ್ಪ, ನರಸಿಂಹಲು ಬ್ರೂಸ್ಲಿ, ರಮೇಶ ಭಜಂತ್ರಿ, ಈರಣ್ಣ ಸೇರಿದಂತೆ ಇನ್ನಿತರರು ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿ ಸಭೆಯಲ್ಲಿ ಇದ್ದರು.

# ಮಾನ್ವಿ: ಸಿಇಒ ಭೇಟಿ ಜೆಜೆಎಂ ಮತ್ತು ಜಲಧಾರೆ ಕಾಮಗಾರಿಗಳ ಪರಿಶೀಲನೆ

ಜಲಧಾರೆ ಯೋಜನೆಯಡಿ ಎಷ್ಟು ಟ್ಯಾಂಕ್‌ಗಳನ್ನು ನಿರ್ಮಿಸಲಾಗಿದೆ ಎಂಬ ಮಾಹಿತಿ ಪಡೆದರು. ಎಲ್ಲಾ ಕಡೆಗಳಲ್ಲಿ ಗುಣಮಟ್ಟದ ಟ್ಯಾಂಕ್‌ಗಳನ್ನು ನಿರ್ಮಿಸಲು ಸೂಚನೆ ನೀಡಿದರು. ಇದಾದ ನಂತರ, ಕೋಳಿ ಕ್ಯಾಂಪಿನ ಅಂಗನವಾಡಿ ಕೇಂದ್ರಕ್ಕೆ ಭೇಟಿ ನೀಡಿದ ಸಿಇಒ, ಮಕ್ಕಳ ದಾಖಲಾತಿ, ಸ್ಟಾಕ್ ರಿಜಿಸ್ಟರ್ ಮತ್ತು ಪೌಷ್ಟಿಕ ಆಹಾರದ ಬಗ್ಗೆ ಮಾಹಿತಿ ಪಡೆದರು. ಮಕ್ಕಳ ದಾಖಲಾತಿಯಲ್ಲಿನ ನ್ಯೂನತೆಗಳನ್ನು ಗಮನಿಸಿ, ಅಂಗನವಾಡಿ ಕಾರ್ಯಕರ್ತೆ ವಿರುದ್ಧ ಕ್ರಮ ಕೈಗೊಳ್ಳಲು ರಾಯಚೂರು ಜಿಲ್ಲಾ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿಗಳಿಗೆ ಶಿಫಾರಸು ಮಾಡುವಂತೆ ಸೂಚಿಸಿದರು.ನೀರಮಾನ್ವಿ ಗ್ರಾಮ ಪಂಚಾಯತಿಯ ವ್ಯಾಪ್ತಿಯ ನಲ್ಲಭಾಯಿ ಕ್ಯಾಂಪಿನಲ್ಲಿನ ಜೆಜೆಎಂ ಕಾಮಗಾರಿಯನ್ನು ವೀಕ್ಷಿಸಿದ ಸಿಇಒ, ನಳದಲ್ಲಿ ನೀರು ಬರುತ್ತಿದೆಯೇ ಎಂದು ಖಚಿತಪಡಿಸಿಕೊಂಡರು.ಈ ಸಂದರ್ಭದಲ್ಲಿ ಮಾನ್ವಿ ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಖಾಲಿದ್ ಅಹಮದ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ ರಾಯಚೂರಿನ ಕಾರ್ಯಪಾಲಕ ಅಭಿಯಂತರ ನಾಗೇಶ್, ಮಾನ್ವಿಯ ಕಾರ್ಯಪಾಲಕ ಅಭಿಯಂತರ ಸತೀಶ್, ಜಲಧಾರೆ ಯೋಜನೆಯ ಅಧಿಕಾರಿಗಳು ಹಾಗೂ ಇತರ ಅಧಿಕಾರಿ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಸಹಕಾರ ಸಂಘಗಳ ಸಮಾಪನೆಗೊಳಿಸಲು ಆಕ್ಷೇಪಣೆಗೆ ಅರ್ಜಿ ಆಹ್ವಾನ

28-01-1995., ರಾಯಚೂರು ಪೊಲೀಸ್ ನೌಕರರ ಗೃಹ ನಿರ್ಮಾಣ ಸಹಕಾರ ಸಂಘ ನಿ, ರಾಯಚೂರು ನೋಂದಣಿ ಸಂಖ್ಯೆ:22406 ದಿನಾಂ ಕ:31-12-1997., ರಾಘವೇಂದ್ರ ಗೃಹ ನಿರ್ಮಾಣ ಸಹಕಾರ ಸಂಘ ನಿ, ರಾಯ ಚೂರು ನೋಂದಣಿ ಸಂಖ್ಯೆ:13859 ದಿನಾಂಕ:12-10-1986., ಬಸವೇಶ್ವರ ಗೃಹ ನಿರ್ಮಾಣ ಸಹಕಾರ ಸಂಘ ನಿ, ರಾಯಚೂರು ನೋಂದಣಿ ಸಂಖ್ಯೆ:18 ದಿನಾಂಕ:22-07-1963., ಶ್ರೀರಾಮನಗರ ಗೃಹ ನಿರ್ಮಾಣ ಸಹಕಾರ ಸಂಘ ನಿ, ರಾಯಚೂರು ನೋಂದಣಿ ಸಂಖ್ಯೆ:8438 ದಿನಾಂಕ:22-08-1973ರ ಸಹಕಾರ ಸಂಘಗಳನ್ನು ಸಮಾಪನೆಗಾಗಿ ಕ್ರಮವಹಿಸಲಾಗುವುದು ಎಂದು ರಾಯಚೂರು ಉಪ ವಿಭಾಗದ ಸಹಕಾರ ಸಂಘಗಳ ಸಹಾಯಕ ನಿಬಂಧಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಿಇಓ ಡಾ.ಗಿರೀಶ್ ಬದೋಲೆ ಅವರಿಂದ ಜೆಜೆಎಂ ಕಾಮಗಾರಿ ವೀಕ್ಷಣೆ



**ಔರಾದ,ಜು.30**–ಬೀದರ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಗಿರೀಶ್ ದಿಲೀಪ್ ಬದೋಲೆ ಮಂಗಳವಾರ ಔರಾದ ತಾಲ್ಲೂಕಿನ ಬೆಳ್ಳುರ್ ಜೆ, ಚಟ್ನಾಳ, ಸಂತಪೂರ್ ಹಾಗೂ ಬೆಳಕುಣಿ ಗ್ರಾಮಗಳಿಗೆ ಭೇಟಿ ನೀಡಿ ಜೆಜೆಎಂ ಕಾಮಗಾರಿಯ ಪ್ರಗತಿ ಪರಿಶೀಲನೆ ನಡೆಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಜೆಜೆಎಂ ಕಾಮಗಾರಿಯ ಮುಖ್ಯ ಉದ್ದೇಶ ಪ್ರತಿ ಮನೆಗೆ ಶುದ್ಧ ಕುಡಿಯುವ ನೀರು ಒದಗಿಸುವುದಾಗಿದೆ ಆದ್ದರಿಂದ ಪ್ರತಿ ಮನೆಗಳಿಗೆ ಶುದ್ಧ ಕುಡಿಯುವ ನೀರು ಒದಗಿಸಬೇಕು. ವಾಟರ್ ಟ್ಯಾಂಕ್ ಗಳಿಗೆ ಫೀಲ್ಡ್ ಟೆಸ್ಟಿಂಗ್ ಕಿಟ್ (FTK) ಅಳವಡಿಸಬೇಕು. ಹಾಗೂ ನೀರು ಸರಬರಾಜಾಗುವ ಪೈಪ್ ಲೈನ್ ಸೋರಿಕೆ ಕುರಿತು ಪರಿಶೀಲನೆ ಮಾಡಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಗ್ರಾಮೀಣ ಕುಡಿಯುವ ನೀರು ಸರಬರಾಜು ಇಲಾಖೆಯ ಕಾರ್ಯನಿರ್ವಾಹಕ ಇಂಜಿನಿಯರ್ ರಾಮಲಿಂಗ ಬಿರಾದಾರ್, ತಾಲ್ಲೂಕ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಶಿವಕುಮಾರ್ ಘಾಟೆ, ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಈ ಸಮಯದಲ್ಲಿ ಉಪಸ್ಥಿತರಿದ್ದರು.

# ಯಾಜ್ಞವಲ್ಕ್ಯರ ಚಿಂತನೆಗಳು ಪಠ್ಯಕ್ರಮದ ಭಾಗವಾಗಲಿ: ಸಿರನೂರಕರ್



**ಕಲಬುರಗಿ,ಜು.30**– ಸನಾತನ ಭಾರತದ ಧಾರ್ಮಿಕ, ಆಧ್ಯಾತ್ಮಿಕ, ತಾತ್ವಿಕ, ವೈಜ್ಞಾನಿಕ ಮತ್ತು ವೈಚಾರಿಕ ಚಿಂತನೆಗಳ ಮೂಲ ಪುರುಷರಲ್ಲಿ ಅಗ್ರಗಣ್ಯರಾಗಿರುವ ಮಹರ್ಷಿ ಯೋಗೀಶ ಯಾಜ್ಞವಲ್ಕ್ಯರ ಜೀವನ, ಅನುಪಮ ಸಾಧನೆ ಮತ್ತು ಅವರು ನೀಡಿದ ಮಹಾನ್ ಕೊಡುಗೆಗಳ ಕುರಿತಾದ ವಿಷಯಗಳು ಶಾಲಾ ಹಾಗೂ ಕಾಲೇಜ ಪಠ್ಯಕ್ರಮದಲ್ಲಿ ಅಳವಡಿಸಬೇಕೆಂದು ಪತ್ರಕರ್ತ, ಸಾಹಿತಿ ಮತ್ತು ಅಂಕಣಕಾರ ಶ್ರೀನಿವಾಸ ಸಿರನೂರಕರ್ ಆಗ್ರಹಿಸಿದ್ದಾರೆ. ಇಡೀ ವಿಶ್ವವೇ ತಾತ್ವಿಕ ಹಾಗು ವೈಜ್ಞಾನಿಕ ಅಂಧಕಾರದಲ್ಲಿ ಮುಳುಗಿದ್ದಾಗ ಯಾಜ್ಞವಲ್ಕ್ಯರು ಮಹೋನ್ನತ ತತ್ವಜ್ಞಾನದ ಬೆಳಕನ್ನು ಜಗತ್ತಿಗೆ ನೀಡಿದರಲ್ಲದೆ ಇಂದಿನ ಆಧುನಿಕ ವಿಜ್ಞಾನವೂ ಬೆರಗಾಗುವಂತಹ ಕಾಲಾತೀತ ವಿಚಾರಗಳನ್ನು ಪ್ರಪಂಚಕ್ಕೆ ಸಾರಿದರೆಂದು ಅವರು ಹೇಳಿದರು.

ಬೆಂಗಳೂರಿನ ಶತಮಾನ ಹಳೆಯದಾದ ಶ್ರೀ ಶುಕ್ಲಯಜುಃಶಾಖಾ ಟ್ರಸ್ಟ್ ಕನ್ನಡ ಸಾಹಿತ್ಯ ಪರಿಷತ್ತಿನ ಶ್ರೀ ಕೃಷ್ಣರಾಜ ಪರಿಷನ್ಮಂದಿರದಲ್ಲಿ ಆಯೋಜಿಸಿದ್ದ ಯಾಜ್ಞವಲ್ಕ್ಯ- ಯಾಜ್ಞವಲ್ಕ್ಯ ಸ್ಮೃತಿ ಮತ್ತು ವಿಜ್ಞಾನೇಶ್ವರ-ಮಿತಾಕ್ಷರ ಕುರಿತಾದ ಉಪನ್ಯಾಸ ನೀಡಿದ ಸಿರನೂರಕರ್ ಅವರು ಐದು ಸಹಸ್ರಮಾನಗಳ ಹಿಂದೆ ಯಾಜ್ಞವಲ್ಕ್ಯರು ಪ್ರತಿಪಾದಿಸಿದ ವಿಜ್ಞಾನ ಹಾಗು ತತ್ವಜ್ಞಾನ ಭಾರತದ ಸನಾತನ ಪರಂಪರೆಯಲ್ಲಿ ಅದ್ವಿತೀಯವಾದದ್ದೆಂದು ಹೇಳಿದರು. "ಗ್ರೀಕ್ ತತ್ವಜ್ಞಾನಿ ಅರಿಸ್ಟಾಟಲ್ ಅವರಂತಹ ಮಾನವ ಜನ್ಮ ಸಂಬಂಧಿ ವೈಜ್ಞಾನಿಕ ವಿಚಾರಗಳನ್ನು ಬುಡಮೇಲು ಮಾಡಿದ ಯಾಜ್ಞವಲ್ಕ್ಯರು ಪ್ರಖರ ವಿಜ್ಞಾನಿಯಾಗಿ ಕಂಗೊಳಿಸುತ್ತಾರೆ. ಅವರ ಆತ್ಮ ಸಿದ್ಧಾಂತ ಮತ್ತು ಪುನರ್ಜನ್ಮ ಸಿದ್ಧಾಂತ ಶಾಶ್ವತವಾಗಿ ಉಳಿಯುವಂತಹ ಸಿದ್ಧಾಂತಗಳಾಗಿದ್ದು ಪುನರ್ಜನ್ಮವನ್ನು ಆಧುನಿಕ ವಿಜ್ಞಾನಿಗಳೂ ಪರಸ್ಕರಿಸಿದ್ದಾರೆ" ಎಂದು ವಿವರಿಸಿದರು.

ಯಾಜ್ಞವಲ್ಕ್ಯರು ಸನಾತನ ಭಾರತದ ಹಾಗು ವಿಶ್ವದ ಪ್ರಾರಂಭಿಕ ಪ್ರಖರ ವಿಜ್ಞಾನಿಯಾಗಿದ್ದರೂ ಅವರ ವೈಜ್ಞಾನಿಕ ಚಿಂತನೆಗಳು ಜನಮಾನಸದಿಂದ ಮರೆಯಾಗಿಯೇ ಉಳಿದಿರುವುದು ದೊಡ್ಡ ದುರಂತವಾಗಿದ್ದು ಇನ್ನಾದರೂ ಅವರ ವಿಚಾರಗಳನ್ನು ಪಠ್ಯಕ್ರಮದಲ್ಲಿ ಅಳವಡಿಸಬೇಕು. ರಾಷ್ಟ್ರೀಯ ಶಿಕ್ಷಣ ನೀತಿಗೆ ಅನುರೂಪವಾದ ಭಾರತೀಯ ಜ್ಞಾನ ಪರಂಪರೆಯ ಅನೇಕ ಹೊಳಹುಗಳನ್ನು ಯಾಜ್ಞವಲ್ಕ್ಯ ಸ್ಮೃತಿಯಲ್ಲಿ ಕಾಣಬಹುದೆಂದು ಸಿರನೂರಕರ್ ತಿಳಿಸಿದರು. ಅಂತಾರಾಷ್ಟ್ರೀಯ ಮಟ್ಟದ ಭಾರತಿ ೀಯ ತತ್ವಜ್ಞಾನದ ವಿಶ್ವವಿದ್ಯಾಲಯವನ್ನು ಯಾಜ್ಞವಲ್ಕ್ಯರ ಹೆಸರಿನಲ್ಲಿ ಸ್ಥಾಪಿಸಿ ವಿವಿಧ ತತ್ವಶಾಸ್ತ್ರಗಳ ತೌಲನಿಕ ಅಧ್ಯಯನವೂ ಸೇರಿದಂತೆ ತತ್ವಜ್ಞಾನದ ಅಧ್ಯಯನ, ಅಧ್ಯಾಪನ ಮತ್ತು ಸಂಶೋಧನೆಗೆ ಅವಕಾಶ ಕಲ್ಪಿಸಿಕೊಡಬೇಕಾದ ಅಗತ್ಯವನ್ನು ಸಿರನೂರಕರ್ ಪ್ರತಿಪಾದಿಸಿದರು.

ಯಾಜ್ಞವಲ್ಕ್ಯ ಸ್ಮೃತಿಯೇ ಪ್ರತ್ಯಕ್ಷವಾಗಿ ಮತ್ತು ಪರೋಕ್ಷವಾಗಿ ಸಾವಿರಾರು ವರ್ಷಗಳಿಂದ ಭಾರತದಲ್ಲಿ ನ್ಯಾಯ ವ್ಯವಸ್ಥೆಯಾಗಿತ್ತೆಂಬುದನ್ನು ಗಮನಕ್ಕೆ ತಂದ ಸಿರನೂರಕರ್ ಅವರ ಸ್ಮೃತಿಗೆ ಹನ್ನೊಂದನೆಯ ಶತಮಾನದಲ್ಲಿ 'ಮಿತಾಕ್ಷರ' ಎಂಬ ವ್ಯಾಖ್ಯಾನ ಬರೆದ ವಿಜ್ಞಾನೇಶ್ವರ ಕನ್ನಡಿಗನೆಂಬುದು ಹೆಮ್ಮೆಯ ವಿಷಯ. " ಹನ್ನೆರಡನೇ ಶತಮಾನದಿಂದ ಭಾರತ ರಾಜಕೀಯ ಸ್ವಾತಂತ್ರ್ಯ ಗಳಿಸುವವರೆಗೆ ಇಡೀ ಭರತಖಂಡದಲ್ಲಿ ಮಿತಾಕ್ಷರ ನ್ಯಾಯ ಪದ್ಧತಿಯೇ ಜಾರಿಯಲ್ಲಿತ್ತು " ಸಿರನೂರಕರ್ ವಿವರಿಸಿದರು. ಸಿರನೂರಕರ್ ಅವರು ಸಭಿಕರೊಂದಿಗೆ ಸಂವಾದವನ್ನು ನಡೆಸಿದರು.

ವಿದ್ವಾನ್ ಡಾ.ಗರೀಶ ಶರ್ಮಾ ಅವರ ಸಹಕಾರದಿಂದ ವಿದ್ವಾನ್ ಡಾ.ಎಲ್. ಜಯಸಿಂಹ ಶರ್ಮಾ ಅವರು ಸಂಗ್ರಹಿಸಿದ ' ಸಾರ್ಥ ದೇವತಾರ್ಚನ' ಹಾಗೂ ' ಶುಕ್ಲ ಯಜುರ್ವೇದ ಸಂಧ್ಯಾವಂದನೆ' ಕೃತಿಗಳನ್ನು ಸಿರನೂರಕರ್ ಬಿಡುಗಡೆ ಮಾಡಿದರು.

ಪತ್ರಕರ್ತ ಎಂ.ವೆಂಕಟೇಶ ಸಿರನೂರಕರ್ ಅವರನ್ನು ಪರಿಚಯಿಸಿದರು. ಟ್ರಸ್ಟ್ ಅಧ್ಯಕ್ಷರಾದ ವೈ.ವಿ.ವೇಣುಗೋಪಾಲ, ಬಿ.ಹೆಚ್.ಶ್ರೀನಿವಾಸ ಮೂರ್ತಿ, ಯಾಜ್ಞವಲ್ಕ್ಯ ಆಶ್ರಮದ ವೇದಪಾಠಶಾಲೆಯ ವಿದ್ಯಾರ್ಥಿಗಳು, ಗುರುಗಳು, ಅನೇಕ ಗಣ್ಯರು ಉಪಸ್ಥಿತರಿದ್ದರು.

# ಪೂಜ್ಯ ಶರಣಬಸವಪ್ಪ ಅಪ್ಪಾಜಿ ಅವರ ಆರೋಗ್ಯ ವಿಚಾರಿಸಿದ ಸಚಿವದ್ವಯರು



**ಕಲಬುರಗಿ,ಜು.30**–ಶರಣಬಸವೇಶ್ವರ ಸಂಸ್ಥಾನದ 8ನೇ ಮಹಾದಾಸೋಹ ಪೀಠಾಧಿಪತಿ ಪೂಜ್ಯ ಡಾ.ಶರಣಬಸವಪ್ಪ ಅಪ್ಪಾಜಿ ಅವರ ಆರೋಗ್ಯ ಸ್ಥಿತಿ ಸಾಮಾನ್ಯವಾಗಿದ್ದು, ಕೆಲವು ದಿನಗಳ ಹಿಂದೆ ಉಸಿರಾಟದ

ಸೋಂಕಿನ ಕಾರಣದಿಂದಾಗಿ ಅವರು ದಾಖಲಾಗಿದ್ದ ಖಾಸಗಿ ಆಸ್ಪತ್ರೆಯಿಂದ ಅವರನ್ನು ಬಿಡುಗಡೆ ಮಾಡುವ ಸಾಧ್ಯತೆಯಿದೆ ಎಂದು ಅವರನ್ನು ಪರೀಕ್ಷಿಸಿದ ವೈದ್ಯರು ತಿಳಿಸಿದ್ದಾರೆ.


ಮಂಗಳವಾರದಂದು ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ್ ಖರ್ಗೆ ಮತ್ತು ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ್ ಪಾಟೀಲ್, ಕೆಕೆಆರ್‌ಡಿಬಿ ಅಧ್ಯಕ್ಷರು, ಜೇವರ್ಗಿ ಶಾಸಕರೂ ಆಗಿರುವ ಡಾ.ಅಜಯ್ ಸಿಂಗ್, ಗುಲಬರ್ಗಾ ದಕ್ಷಿಣ ಮತಕ್ಷೇತ್ರದ ಶಾಸಕ ಅಲ್ಲಮಪ್ರಭು ಪಾಟೀಲ್, ಎಂಎಲ್‌ಸಿ ತಿಪ್ಪಣ್ಣ ಕಮಕನೂರ್ ಮತ್ತು ಕಾಂಗ್ರೆಸ್ ಪಕ್ಷದ ಇತರ ಹಿರಿಯ ನಾಯಕರು ಖಾಸಗಿ ಆಸ್ಪತ್ರೆಗೆ ಭೇಟಿ ನೀಡಿ ಪೂಜ್ಯ ಡಾ.ಶರಣಬಸವಪ್ಪ ಅಪ್ಪಾಜಿ ಅವರನ್ನು ಭೇಟಿ ಮಾಡಿ ವೈದ್ಯರು ಮತ್ತು ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಚೇರ್‌ಪರ್ಸನ್ ಮಾತೋಶ್ರೀ ಪೂಜ್ಯ ಡಾ.ದಾ ಕ್ಷಾಯಿಣಿ ಅವ್ವಾಜಿ ಮತ್ತು ಸಂಘದ ಕಾರ್ಯದರ್ಶಿ ಬಸವರಾಜ ದೇಶಮುಖ ಅವರೊಂದಿಗೆ ಅವರ ಆರೋಗ್ಯ ಸ್ಥಿತಿಯ ಬಗ್ಗೆ ವಿಚಾರಿಸಿದರು. ಇಬ್ಬರೂ ಸಚಿವರು ಡಾ.ಅಪ್ಪಾಜಿ ಮತ್ತು ಮಾತೋಶ್ರೀ ಡಾ.ಅವ್ವಾಜಿ ಅವರೊಂದಿಗೆ 10 ನಿಮಿಷಗಳಿಗೂ ಹೆಚ್ಚು ಸಮಯ ಕಳೆದರು ಮತ್ತು ಪೂಜ್ಯ ಡಾ.ಅಪ್ಪಾಜಿ ಅವರ ಆರೋಗ್ಯ ಚೇತರಿಕೆಯ ಬಗ್ಗೆ ತಿಳಿದು ತಮ್ಮ ಸಂತೋಷವನ್ನು ವ್ಯಕ್ತಪಡಿಸಿದರು. ಅದೇ ಸಮಯದಲ್ಲಿ, ಎಐಸಿಸಿ ಅಧ್ಯಕ್ಷರಾದ ಡಾ.ಮಲ್ಲಿಕಾರ್ಜುನ ಖರ್ಗೆ ಅವರು ದೂರವಾಣಿಯ ಮುಖಾಂತರ ಸಚಿವ ಪ್ರಿಯಾಂಕ್ ಖರ್ಗೆ ಅವರೊಂದಿಗೆ ಮಾತನಾಡಿ ಪೂಜ್ಯ ಡಾ.ಅಪ್ಪಾಜಿಯವರ ಆರೋಗ್ಯದ

ಬಗ್ಗೆ ವಿಚಾರಿಸಿ, ಅವರ ಚೇತರಿಕೆಯ ಬಗ್ಗೆ ತಿಳಿದು ಹರ್ಷ ವ್ಯಕ್ತಪಡಿಸಿದರು.ಪೂಜ್ಯ ಡಾ.ಅಪ್ಪಾಜಿ ಅವರನ್ನು ಉಸಿರಾಟದ ಸೋಂಕಿನ ದೂರುಗಳೊಂದಿಗೆ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಈಗ ಚಿಕಿತ್ಸೆಗೆ ಉತ್ತಮವಾಗಿ ಪ್ರತಿಕ್ರಿಯಿಸುತ್ತಿದ್ದಾರೆ. ಅವರ ಆರೋಗ್ಯ ಸ್ಥಿತಿ 24 ಗಂಟೆಗಳ ಒಳಗೆ ಸಾಮಾನ್ಯ ಸ್ಥಿತಿಗೆ ಮರಳಿದೆ. ಆಸ್ಪತ್ರೆಯ ತೀವ್ರ ನಿಗಾ ಘಟಕದಲ್ಲಿ ಇರಿಸಲಾಗಿದ್ದು ಬುಧವಾರ ಆಸ್ಪತ್ರೆಯಿಂದ ಬಿಡುಗಡೆ ಮಾಡುವ ಸಾಧ್ಯತೆಯಿದೆ.

ಕಲಬುರಗಿ ನಗರ ಪೊಲೀಸ್ ಆಯುಕ್ತ ಡಾ.ಶರಣಪ್ಪ ಎಸ್.ಡಿ.ಕೂಡ ಆಸ್ಪತ್ರೆಗೆ ಭೇಟಿ ನೀಡಿ ಪೂಜ್ಯ ಡಾ.ಅಪ್ಪಾಜಿ ಅವರನ್ನು ಭೇಟಿ ಮಾಡಿ ಮಾತೋಶ್ರೀ ಪೂಜ್ಯ ಡಾ.ದಾಕ್ಷಾಯಿಣಿ ಅವ್ವಾಜಿ ಅವರೊಂದಿಗೆ ಅವರ

ಆರೋಗ್ಯ ಸ್ಥಿತಿಯ ಬಗ್ಗೆ ವಿಚಾರಿಸಿದರು. ಈ ಸಂದರ್ಭದಲ್ಲಿ ಡಾ. ಉಮಾದೇವಿ ದೇಶಮುಖ, ಶರಣಬಸವ ವಿಶ್ವವಿದ್ಯಾಲಯದ ಉಪಕುಲಪತಿ ಪ್ರೊ.ಅನಿಲಕುಮಾರ ಬಿಡವೆ, ಡೀನ್ ಡಾ.ಲಕ್ಷ್ಮೀ ಪಾಟೀಲ್ ಮಾಕಾ, ಹಣಕಾಸು ಅಧಿಕಾರಿ ಡಾ.ಕಿರಣ್ ಮಾಕಾ, ಶರಣಬಸವೇಶ್ವರ ಕಲಾ ಕಾಲೇಜಿನ ಪ್ರಾಂಶುಪಾಲ ಪ್ರೊ. ಸುರೇಶ್ ನಂದಗಾಂವ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಹಾವು ಕಚ್ಚಿ ಸಾವು ಬದುಕಿನ ನಡುವೆ ಹೋರಾಟ ನಡೆಸುತ್ತಿದ್ದ ಮಹಿಳೆ ಜೀವ ಉಳಿಸಿದ ಜೀವಾ ಆಸ್ಪತ್ರೆ



**ಕಲಬುರಗಿ,ಜು.30**–ಕಳೆದ ಏಳು ತಿಂಗಳಿಂದ ಒಂದಿಲ್ಲ ಒಂದು ವಿಶೇಷ ಶಸ್ತ್ರ ಚಿಕಿತ್ಸೆಗಳ ಮೂಲಕ ಹೆಸರು ಮಾಡುತ್ತಿರುವ ನಗರದ ಜೀವಾ ಸೂಪರ್ ಸ್ಪೇಷಾಲಿಟಿ ಆಸ್ಪತ್ರೆಯು ಹಾವು ಕಚ್ಚಿ ವಿಷ ಮೈಯೆಲ್ಲಾ ಏರಿದ್ದ ಮಹಿಳೆಗೆ ಸೂಕ್ತ ಚಿಕಿತ್ಸೆ ನೀಡುವುದರ ಮೂಲಕ ಜೀವ ಉಳಿಸುವಲ್ಲಿ ಯಶಸ್ವಿಯಾಗಿದೆ.

ಕಳೆದ ಆರು ದಿನಗಳ ಹಿಂದೆ ಶಹಾಪುರ ತಾಲ್ಲೂಕಿನ ಮದ್ದರಕಿ ಗ್ರಾಮದ ಮಹಿಳೆ ಗದ್ಯಮ್ಮ ಗಂಡ ಹನುಮಂತ (35) ಇವರು ರಾತ್ರಿ ಮನೆಯಲ್ಲಿ ಮಲಗಿದ್ದಾಗ ಹಾವು ಕಚ್ಚಿತ್ತು. ತಕ್ಷಣವೇ ಶಹಾಪುರ ಆಸ್ಪತ್ರೆಯಲ್ಲಿ ಪ್ರಥಮ ಚಿಕಿತ್ಸೆ ನೀಡಿ, ನಗರದ ಜೀವಾ ಸೂಪರ್ ಸ್ಪೇಷಾಲಿಟಿ ಆಸ್ಪತ್ರೆಗೆ ದಾಖಲಿಸಲಾಯಿತು.

ವಿಷಪೂರಿತ ಹಾವು ಕಚ್ಚಿದ್ದರಿಂದ ಆಸ್ಪತ್ರೆಗೆ ಕರೆತಂದಿದ್ದಾಗ ಅವರು ಸಂಪೂರ್ಣ ಅಸ್ವಸ್ಥರಾಗಿದ್ದರು. ಸಾವು-ಬದುಕಿನ ನಡುವೆ ಹೋರಾಟ ನಡೆಸುತ್ತಿದ್ದ ಅವರನ್ನು ಬದುಕಿಸಲು ಆಸ್ಪತ್ರೆಯ ಮುಖ್ಯಸ್ಥರಾದ ಡಾ.ಅಜಯ್ ಎ.ಗುತ್ತೇದಾರ, ಡಾ.ಸುಶೀಲ ಗುತ್ತೇದಾರ ಅವರು ಕೂಡಲೇ ಅವರನ್ನು ತುರ್ತು ನಿಗಾ ಘಟಕಕ್ಕೆ ದಾಖಲಿಸಿ ಮೂರು ದಿನಗಳ ಕಾಲ ಸೂಕ್ತ ಚಿಕಿತ್ಸೆ ನೀಡುವುದರ ಮೂಲಕ ಜೀವ ಉಳಿಸುವಲ್ಲಿ ಯಶಸ್ವಿಯಾಗಿದ್ದಾರೆ.

ಮಹಿಳೆ ಸಂಪೂರ್ಣ ಗುಣಮುಖರಾಗಿರುವುದಕ್ಕೆ ಆಸ್ಪತ್ರೆಯ ಮುಖ್ಯ ವೈದ್ಯರದಾದ ಡಾ.ಹಿಮಾಯತ್ ಉಲ್ಲಾ ಖಾನ್, ಡಾ.ವಾಹಿದ್ ಅಲಿ (ಜನರಲ್ ಮೆಡಿಸಿನ್), ಡಾ.ವಿರೇಶ, ಡಾ.ಮಲ್ಲಿಕಾರ್ಜುನ, ಡಾ.ಶಿವಶರಣ (ತೀವ್ರ ನಿಗಾ ತಜ್ಞರು) ಸಂತಸ ವ್ಯಕ್ತಪಡಿಸಿದ್ದಾರೆ.

# 2ನೇ ದಿನವೂ ಶಾಸಕರಿಂದ ಅಹವಾಲು ಸ್ವೀಕಾರ



ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಂದು ವಿಧಾನಸೌಧದಲ್ಲಿ ಬೀದರ್ ಜಿಲ್ಲಾ ಉಸ್ತವಾರಿ ಸಚಿವ ಈಶ್ವರ ಬಿ ಖಂಡ್ರೆ, ಸಚಿವ ರಹೀಂಖಾನ್ ಹಾಗೂ ಶಾಸಕರುಗಳ ಜೊತೆ ಬೀದರ್ ಜಿಲ್ಲೆಯ ಅಭಿವೃದ್ಧಿಯ ಕುರಿತಂತೆ ಸಮಾಲೋಚನೆ ನಡೆಸಿದರು.

ಬೆಂಗಳೂರು, ಜು. 30– ಕಾಂಗ್ರೆಸ್ ಶಾಸಕರ ಅಸಮಾಧಾನ, ಮುನಿಸನ್ನು ತಣಿಸಿ, ಅವರ ದೂರು ದುಮ್ಮಾನಗಳನ್ನು ಆಲಿಸಿ ನಿನ್ನೆಯಿಂದ ಜಿಲ್ಲಾವಾರು ಕಾಂಗ್ರೆಸ್ ಶಾಸಕರ ಸಭೆ ನಡೆಸುತ್ತಿರುವ ಮುಖ್ಯಮಂತ್ರಿ ಸಿದ್ದರಾಮಯ್ಯನವರು 2ನೇ ದಿನವಾದ ಇಂದು 10 ಜಿಲ್ಲೆಗಳ ಕೈ ಶಾಸಕರ ಅಹವಾಲುಗಳಿಗೆ ಕಿವಿಯಾದರು.

ಕ್ಷೇತ್ರದ ಅಭಿವೃದ್ಧಿಗೆ ಅನುದಾನ ಸಿಗದೆ ಅಸಮಾಧಾನಗೊಂಡಿದ್ದ ಶಾಸಕರಿಗೆ 50 ಕೋಟಿ ರೂ. ಕ್ಷೇತ್ರ ಅಭಿವೃದ್ಧಿಗೆ ಅನುದಾನ ಒದಗಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಆ ಅನುದಾನವನ್ನು ಯಾವ ಯಾವ ಕೆಲಸಗಳಿಗೆ ಬಳಸಬೇಕು, ಯಾವ ಕೆಲಸಗಳನ್ನು ಈ ಅನುದಾನದಡಿ ಕೈಗೆತ್ತಿಕೊಳ್ಳಬೇಕು ಎಂಬ ಬಗ್ಗೆಯೂ ಶಾಸಕರಿಗೆ ಮಾರ್ಗದರ್ಶನ ಮಾಡಿ ಅವರಿಂದ ಆಗಬೇಕಾದ ಕೆಲಸಗಳ ಪಟ್ಟಿಗಳನ್ನು ಸ್ವೀಕರಿಸುವ ಕೆಲಸ ನಡೆಸಿದರು.

ನಿನ್ನೆ ಚಾಮರಾಜನಗರ, ಮೈಸೂರು, ಕೊಡಗು, ಹಾಸನ, ದಕ್ಷಿಣ ಕನ್ನಡ, ತುಮಕೂರು ಜಿಲ್ಲೆಗಳ ಕೈ ಶಾಸಕರು ಹಾಗೂ ಉಸ್ತುವಾರಿ ಸಚಿವರುಗಳ ಸಭೆ ನಡೆಸಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಇಂದು ಬೀದರ್, ಕಲ್ಬುರ್ಗಿ, ಯಾದಗಿರಿ, ರಾಯಚೂರು, ಕೊಪ್ಪಳ, ವಿಜಯನಗರ, ಬಳ್ಳಾರಿ, ಬೆಳಗಾವಿ, ಹುಬ್ಬಳ್ಳಿ, ಧಾರವಾಡ, ಉತ್ತರ ಕನ್ನಡ ಜಿಲ್ಲೆ ಸೇರಿದಂತೆ 10 ಜಿಲ್ಲೆಗಳ ಕಾಂಗ್ರೆಸ್ ಶಾಸಕರ ಜತೆ ಸಮಾಲೋಚನೆ ನಡೆಸಿದರು.

ಇಂದು ಬೆಳಿಗ್ಗೆಯಿಂದಲೇ ವಿಧಾನಸೌಧದ 3ನೇ ಮಹಡಿಯಲ್ಲಿರುವ ತಮ್ಮ ಕಚೇರಿಯಲ್ಲಿ ಜಿಲ್ಲಾವಾರು ಶಾಸಕರ ಸಭೆ ಮುಂದುವರೆಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯನವರು, ಅಭಿವೃದ್ಧಿಗೆ ಸಂಬಂಧಿಸಿದಂತೆ ಶಾಸಕರಿಗೆ ಕೆಲ ಕಿವಿಮಾತುಗಳನ್ನು ಹೇಳಿದರು.

ಹಾಗೆಯೇ ಶಾಸಕರ ಸಮಸ್ಯೆಗಳಿಗೆ ಸ್ಪಂದಿಸುವಂತೆ ಜಿಲ್ಲಾ ಉಸ್ತುವಾರಿ ಸಚಿವರುಗಳಿಗೂ ತಿಳಿ ಹೇಳಿದರು.

ಮುಖ್ಯಮಂತ್ರಿಗಳ ಭೇಟಿ ಸಂದರ್ಭದಲ್ಲಿ ಹಲವು ಜಿಲ್ಲೆಯ ಶಾಸಕರುಗಳು 50 ಕೋಟಿ ರೂ. ಅನುದಾನ ಸಾಲದು, ಹೆಚ್ಚಿನ ಅನುದಾನ ನೀಡಿ. ನಮ್ಮ ಕ್ಷೇತ್ರದಲ್ಲಿ ಬೇಕಾದಷ್ಟು ಅಭಿವೃದ್ಧಿ ಕೆಲಸಗಳು ಆಗಬೇಕಿದೆ ಎಂದು ಮನವಿ ಮಾಡಿದರು ಎಂದು ಹೇಳಲಾಗಿದೆ.

ಇಂದು 10 ಜಿಲ್ಲೆಯ ಶಾಸಕರ ಜತೆ ಸಭೆ ನಡೆಸಿರುವ ಮುಖ್ಯಮಂತ್ರಿಗಳು ನಾಳೆಯೂ ಶಾಸಕರ ಜತೆಗಿನ ಸಭೆಯನ್ನು ಮುಂದುವರೆಸಲಿದ್ದಾರೆ.

# ನಗರದಲ್ಲಿ ಅಡಗಿದ್ದ ಅಲ್ ಖೈದಾ ನಾಯಕಿ ಬಂಧನ



ಅಹಮದಾಬಾದ್,ಜು.30–ಅಲ್ ಖೈದಾ ಉಗ್ರ ಸಂಘಟನೆಯೊಂದಿಗೆ ನಂಟು ಹೊಂದಿ ಕರ್ನಾಟಕದಲ್ಲಿ ಭಯೋತ್ಪಾದಕ ಚಟುವಟಿಕೆ ನಡೆಸುತ್ತಾ ಬೆಂಗಳೂರಿನಲ್ಲಿ ಅಡಗಿದ್ದ ಅಲ್ ಖೈದಾ ಭಯೋತ್ಪಾದಕ ಘಟಕದ ನಾಯಕಿಯನ್ನು ಗುಜರಾತ್ ಭಯೋತ್ಪಾದನಾ ನಿಗ್ರಹ ದಳ (ಎಟಿಎಸ್)ದ ಅಧಿಕಾರಿಗಳು ಬಂಧಿಸಿ ತೀವ್ರ ವಿಚಾರಣೆ ಕೈಗೊಂಡಿದ್ದಾರೆ.

ಬೆಂಗಳೂರಿನಲ್ಲಿ ಅಡಗಿರುವ ಖಚಿತವಾದ ಮಾಹಿತಿಯನ್ನು ಆಧರಿಸಿ ಕಾರ್ಯಾಚರಣೆ ಕೈಗೊಂಡ ಎಟಿಎಸ್ ಅಧಿಕಾರಿಗಳು ಅಲ್ ಖೈದಾ ಭಯೋತ್ಪಾದಕ ಘಟಕದ ನಾಯಕಿಯ ಶಮಾ ಪರ್ವೀನ್(30)ಳನ್ನು ಬಂಧಿಸಿ ಗುಜರಾತ್ ಗೆ ಕರೆತಂದು ವಿಚಾರಣೆ ನಡೆಸಿ ಮಾಹಿತಿ ಸಂಗ್ರಹಿಸುತ್ತಿದ್ದಾರೆ.

ಅರೋಪಿಯು ದೇಶ ವಿರೋಧಿ ಕೃತ್ಯಗಳನ್ನು ಮಾಡುವ ಮೂಲಕ ಜಿಹಾದಿ ಚಟುವಟಿಕೆಗಳಲ್ಲಿ ಶಾಮೀಲಾಗಿದ್ದಳು ಎಂಬ ಆರೋಪವಿದ್ದು ಹೆಚ್ಚಿನ ತನಿಖೆಯನ್ನು ಕೈಗೊಂಡು ಕೇಂದ್ರ ತನಿಖಾ ತಂಡಗಳಿಗೂ ಮಾಹಿತಿಯನ್ನು ನೀಡಲಾಗಿದೆ.

ಗುಜರಾತ್ ಎಟಿಎಸ್ ಅಧಿಕಾರಿಗಳು ನೀಡಿರುವ ಮಾಹಿತಿ ಪ್ರಕಾರ, ಈ ಹಿಂದೆ ಬಂಧಿಸಲಾದ ನಾಲ್ವರು ಭಯೋತ್ಪಾದಕರೊಂದಿಗೆ ಶಮಾ ಪರ್ವೀನ್ ಸಂಪರ್ಕದಲ್ಲಿದ್ದಳು. ಭಯೋತ್ಪಾದಕ ಚಟುವಟಿಕೆಗಳಿಗೆ ಸಂಬಂಧಿಸಿದ ಇನ್‌ಸ್ಟಾಗ್ರಾಂ ಗುಂಪಿನಲ್ಲಿ ಸಕ್ರಿಯಳಾಗಿದ್ದಳು ಮತ್ತು ದೇಶ ವಿರೋಧಿ ವೀಡಿಯೊಗಳನ್ನು ಅಪ್‌ಲೋಡ್ ಮಾಡುವ ಮೂಲಕ ಯುವಕರನ್ನು ಜಿಹಾದಿ ಕೃತ್ಯಗಳಿಗೆ ಪ್ರಚೋದಿಸುತ್ತಿದ್ದಳು.

ಶಮಾ ಪರ್ವೀನ್ ಭಯೋತ್ಪಾದಕ ಚಟುವಟಿಕೆಗಳಲ್ಲಿ ಶಾಮಿಲಾಗಿರುವುದು ರಹಸ್ಯ ತನಿಖೆಯಲ್ಲಿ ತಿಳಿದುಬಂದಿದೆ. ಆನ್‌ಲೈನ್ ವೇದಿಕೆಗಳಲ್ಲಿ ಜಿಹಾದಿ ಪಿತೂರಿ ನಡೆಸಿದ್ದಾಗಿ ವಿಚಾರಣೆ ವೇಳೆ ಆಕೆ ಒಪ್ಪಿಕೊಂಡಿದ್ದಾಳೆ ಎಂದು ಎಟಿಎಸ್ ಅಧಿಕಾರಿಗಳು ತಿಳಿಸಿದ್ದಾರೆ.

ಶಮಾ ಪರ್ವೀನ್ ಆನ್‌ಲೈನ್ ಮೂಲಕ ಭಯೋತ್ಪಾದಕ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಿರುವ ಬಗ್ಗೆ ತನಿಖೆಯ ಸಮಯದಲ್ಲಿ ಆಕೆಯಿಂದ ವಿವರವಾದ ಪುರಾವೆಗಳು ಮತ್ತು ಡಿಜಿಟಲ್ ಡೇಟಾವನ್ನು ವಶಪಡಿಸಿಕೊಳ್ಳಲಾಗಿದೆ. ಈಗ ಹೆಚ್ಚಿನ ಮಾಹಿತಿಯನ್ನು ಪಡೆಯಲು ಆಂತರಿಕ ವಿಚಾರಣೆಯನ್ನು ಪ್ರಾರಂಭಿಸುತ್ತಿದೆ ಎಂದು ಅಧಿಕಾರಿಗಳು ಹೇಳಿದರು.

ಅಲ್ ಕೈದಾ ಜೊತೆ ನಂಟು ಹೊಂದಿರುವ ನಾಲ್ವರನ್ನು ಈ ಹಿಂದೆ ಗುಜರಾತ್ ಎಟಿಎಸ್ ಬಂಧಿಸಿತ್ತು. ಬಂಧಿತ ನಾಲ್ವರಲ್ಲಿ ಇಬ್ಬರು ಗುಜರಾತ್‌ನ ಅಹಮದಾಬಾದ್ ಮತ್ತು ಮೋಡಸಾದವರು. ಇನ್ನಿಬ್ಬರು ದೆಹಲಿ ಮತ್ತು ನೋಯ್ಡಾದವರು. ಈ ನಾಲ್ವರೂ ಅಲ್ ಖೈದಾ ಜತೆ ಸಂಪರ್ಕ ಹೊಂದಿದ್ದರು. ಈ ಭಯೋತ್ಪಾದಕರು ಇನ್‌ಸ್ಟಾಗ್ರಾಮ್ ಸೇರಿದಂತೆ ಸಾಮಾಜಿಕ ಮಾಧ್ಯಮಗಳಲ್ಲಿ ಪ್ರಚೋದನಕಾರಿ ವಿಷಯವನ್ನು ಹಂಚಿಕೊಳ್ಳುತ್ತಿದ್ದರು. ಅವರು 'ಘಜ್ವಾ–ಎ–ಹಿಂದ್' ಬಗ್ಗೆ ವೀಡಿಯೊಗಳು ಮತ್ತು ಭಾಷಣಗಳ ಮೂಲಕ ಯುವಕರನ್ನು ಮೂಲಭೂತವಾದಿಗಳನ್ನಾಗಿ ಮಾಡಲು ಪ್ರಯತ್ನಿಸಿದ್ದರು. ಈ ನಾಲ್ವರ ವಿಚಾರಣೆ ವೇಳೆ ಬೆಂಗಳೂರನ್ನು ಕೇಂದ್ರವಾಗಿಸಿಕೊಂಡು ಕಾರ್ಯಾಚರಿಸುತ್ತಿರುವ ಶಮಾ ಪರ್ವೀನ್ ಬಗ್ಗೆ ಮಾಹಿತಿ ದೊರೆತಿದೆ.

ಶಂಕಿತ ಉಗ್ರರ ಬಂಧನದ ನಂತರ ಚೋದನಕಾರಿ, ಜಿಹಾದಿ ವಿಡಿಯೋಗಳನ್ನು ಪ್ರಸಾರ ಮಾಡುವ ಐದು ಇನ್‌ಸ್ಟಾಗ್ರಾಮ್ ಖಾತೆಗಳ ಮೇಲೆ ಎಟಿಎಸ್ ಕಣ್ಣಿಟ್ಟಿತ್ತು. ಅವುಗಳನ್ನು ಒಬ್ಬನೇ ಆರೋಪಿ ನಿರ್ವಹಿಸುತ್ತಿರುವುದು ಗೊತ್ತಾಗಿತ್ತು. ಖಾತೆಯ ಮೂಲ ಪತ್ತೆಹಚ್ಚಿದ ನಂತರ, ಎಫ್‌ಎಸ್‌ಎಲ್ ಸೇರಿದಂತೆ ನಾಲ್ಕು ವಿಭಿನ್ನ ತಂಡಗಳನ್ನು ರಚಿಸಲಾಗಿತ್ತು. ನಂತರ ಎಟಿಎಸ್ ಅಧಿಕಾರಿಗಳು ಆರೋಪಿಗಳ ಬೆನ್ನತ್ತಿ ಬಂಧಿಸಿದ್ದರು.

# ಕೂದಲು ಉದುರದಿರಲು ಮನೆಮದ್ದು



ಸೂರ್ಯಕಾಂತಿ ಬೀಜ, ಅಗಸೆದ ಬೀಜ, ಶಿಯಾಬೀಜಗಳು ಇವುಗಳಲ್ಲಿ ವಿಟಮಿನ್ ಇ ಅಧಿಕವಿದ್ದು ಪ್ರತಿದಿನ1 ಸ್ಪೂನ್ ತಿನ್ನುವುದರಿಂದ ಕೂದಲು ಸೊಂಪಾಗಿ ಬೆಳೆಯುವುದು

ಆಕರ್ಷಕ ಕೂದಲು ಬೇಕೆಂದರೆ ನಿಮ್ಮ ಊಟದ ತಟ್ಟೆಯಲ್ಲಿ ಹಸಿರು ಇರುವಂತೆನೋಡಿಕೊಳ್ಳಿ, ಅಂದರೆ ಸೊಪ್ಪು ಅಧಿಕ ತಿನ್ನಬೇಕು.

ಚೆನ್ನಾಗಿ ನೀರು ಕುಡಿಯಿರಿ ಹೌದು, ಕೂದಲಿನ ಶೇ.25ರಷ್ಟು ಜೀವಕೋಶಗಳು ನೀರಿನಿಂದ ನಿರ್ಜಲೀಕರಣಗೊಳ್ಳುವುದರಿಂದ ನಿರ್ಮಿತವಾಗಿರುತ್ತದೆ. ದೇಹ ಕೂದಲು ಉದುರುವ ಸಮಸ್ಯೆ ಹೆಚ್ಚಾಗುತ್ತದೆ. ಕೂದಲಿನ ಬೇರುಗಳು ಗಟ್ಟಿಯಾಗಿರಲು ದೇಹದಲ್ಲಿ ನೀರಿನ ಪ್ರಮಾಣ ಸರಿಯಾಗಿರುವುದು ಅತ್ಯಂತ ಅಗತ್ಯ. ದಿನವೊಂದರಲ್ಲಿ ಕನಿಷ್ಟ 8 ಲೋಟಗಳಷ್ಟು ನೀರು ಕುಡಿಯುವುದನ್ನು ತಪ್ಪಿಸುವುದು ಒಳ್ಳೆಯದಲ್ಲ.

ಎಣ್ಣೆ ಮಸಾಜ್ ಮಾಡಿಕೊಳ್ಳಿ ಹೆಚ್ಚಿನವರು ತಲೆಗೆ ಎಣ್ಣೆ ಹಾಕಿಮಸಾಜ್ ಮಾಡುವುದನ್ನು ಮರೆತೇ ಬಿಡುತ್ತಾರೆ. ಅಷ್ಟೇ ಏಕೆ, ಅನೇಕರು ತಲೆಗೆ ಎಣ್ಣೆ ಹಾಕುವ ಅಭ್ಯಾಸವನ್ನೇ ಇಟ್ಟುಕೊಳ್ಳುವುದಿಲ್ಲ.ವಾರದಲ್ಲಿ ಕನಿಷ್ಠ 20ನಿಮಿಷದಷ್ಟು ಕಾಲ ತಲೆಗೆ ಎಣ್ಣೆ ಹಾಕಿ ಮಸಾಜ್ ಮಾಡುವುದು ಮಾಡಿದರೆ ಕೂದಲಿಗೆ ಬೇಕಾದ ಆರೈಕೆ ಸಿಗುತ್ತದೆ.ಇದರಿಂದಾಗಿಕೂದಲು ಸೊಂಪಾಗಿ ಬೆಳೆಯುವುದು.

ಕೂದಲಿನ ಬುಡ ಒಣಗಲು ಬಿಡಬೇಡಿ.ಆರೋಗ್ಯಕರ ಕೂದಲಿಗಾಗಿ ವ್ಯಾಯಾಮ ಮಾಡಿದೈಹಿಕ ಆರೋಗ್ಯ ಕಾಪಾಡಿಕೊಳ್ಳುವುದೂ ಕೂದಲಿನ ರಕ್ಷಣೆಯ ಒಂದು ಮಾರ್ಗ ಎನ್ನಲಾಗುತ್ತದೆ. ಹಾಗೆಂದು ಗಂಟೆಗಟ್ಟಲೆ ಜಿಮ್ ನಲ್ಲಿ ಕಾಲ ಕಳೆಯುವುದು ಎಲ್ಲದಕ್ಕೂ ಪರಿಹಾರವಲ್ಲ.ದಿನನಿತ್ಯಕೊಂಚ ಕಾಲದೈಹಿಕವಾಗಿ ವ್ಯಾಯಾಮ ಮಾಡುವುದು, ಚಟುವಟಿಕೆಗಳಲ್ಲಿ ನಿರತವಾಗಿರುವುದು ದೇಹದ ಆರೋಗ್ಯಕ್ಕೆ ಹಾಗೂ ಕೂದಲಿನ ಬೆಳವಣಿಗೆಗೂ ಒಳ್ಳೆಯದು.

ಈರುಳ್ಳಿಯ ರಸ ತೆಗೆದು ತಲೆಗೆ ಹಚ್ಚಿ ಅರ್ಧ ಗಂಟೆಯ ನಂತರ ಸ್ನಾನ ಮಾಡಿದರೆ ತಲೆ ಹೊಟ್ಟು ನಿಧಾನವಾಗಿ ನಿವಾರಣೆಯಾಗುತ್ತದೆ.ವಾರದಲ್ಲಿ ಎರಡು ಬಾರಿ ಹೀಗೆ ಮಾಡಿದರೆ ಉತ್ತಮ ಫಲಿತಾಂಶ ಸಿಗುತ್ತದೆ.

ತಲೆಗೆ ಶ್ಯಾಂಪೂ ಬಳಸಿ ಸ್ನಾನಮಾಡಿದ ಬಳಿಕ ಕೊನೆಯಲ್ಲಿ ಬಿಸಿನೀರಿಗೆ ಈರುಳ್ಳಿ ರಸ ಹಾಕಿ ತೊಳೆಯುವುದನ್ನು ಅಭ್ಯಾಸ ಮಾಡಿಕೊಳ್ಳಬೇಕು. ಈ ರೀತಿ ಮಾಡುತ್ತಾಬಂದರೆ ಕೂದಲು ಉದುರುವ ಸಮಸ್ಯೆಬಹುಬೇಗ ಕಡಿಮೆಯಾಗುತ್ತದೆ.

ಒಂದು ಚಮಚ ಕೊಬ್ಬರಿ ಎಣ್ಣೆಯ ಜತೆಗೆ ಒಂದು ಚಮಚ ಈರುಳ್ಳಿ ರಸ, ಒಂದು ಚಮಚ ಬಾದಾಮಿ ಎಣ್ಣೆ ಮಿಶ್ರಣ ಮಾಡಿಕೊಂಡು ತಲೆಗೆಮಸಾಜ್ ಮಾಡುವುದರಿಂದ ಕೂದಲಿಗೆ ಕಾಂತಿ ಬರುವುದರ ಜತೆಗೆ ಹೊಟ್ಟು ಕೂಡ ನಿವಾರಣೆಯಾಗುತ್ತದೆ.

ಈರುಳ್ಳಿಗೆಜೇನುತುಪ್ಪಸೇರಿಸಿಕೊಂಡು ದಿನನಿತ್ಯ ಸೇವಿಸುವುದರಿಂದ ಕೂದಲು ಉದುರುವುದು ಕಡಿಮೆಯಾಗುತ್ತದೆ.

ಈರುಳ್ಳಿಯನ್ನು ಸಣ್ಣದಾಗಿ ಹಚ್ಚಿ ಅದಕ್ಕೆ ಒಂದು ಚಮಚ ಆಲಿವ್ ಎಣ್ಣೆ ಸೇರಿಸಿ ತಲೆಗೆ ಹಚ್ಚಿ ಎರಡು ಗಂಟೆಯ ನಂತರ ಸ್ನಾನ ಮಾಡಿದರೆ ಕೂದಲು ಆರೋಗ್ಯವಾಗಿರುತ್ತದೆ.

ಕೂದಲು ಉದುರುವುದನ್ನುತಡೆಗಟ್ಟುವಲ್ಲಿ ಎಣ್ಣೆ ಮಸಾಜ್ ಕೂಡಸಹಕಾರಿ.ತೆಂಗಿನೆಣ್ಣೆಯನ್ನು ಬಿಸಿ ಮಾಡಿ, ಅದು ಉಗುರು ಬೆಚ್ಚಗೆ ಇರುವಾಗ ಮೆಲ್ಲನೆ ಕೈಯಲ್ಲಿ ತೆಗೆದುಕೊಂಡು ತಲೆಕೂದಲಿನ ಬುಡಕ್ಕೆ ಹಚ್ಚಿ ಮೆಲ್ಲನೆ ಮಸಾಜ್ ಮಾಡಿ, ಹೀಗೆ ಮಾಡುವುದರಿಂದ ರಕ್ತ ಸಂಚಾರ ಹೆಚ್ಚುವುದು, ನಂತರ ಒಂದು ಟವಲ್ ಅನ್ನು ಬಿಸಿ ನೀರಿನಲ್ಲಿ ಅದ್ದಿ, ಹಿಂಡಿ ನಂತರ 0ತಲೆಗೆ ಸುತ್ತಿ. ಹೀಗೆ ಮಾಡುವುದರಿಂದ ಕೂದಲಿನ ಬುಡಎಣ್ಣೆಯನ್ನುಹೀರಿಕೊಂಡು ಬಲವಾಗುತ್ತದೆಹಾಗೂ ಕೂದಲು ಉದುರುವುದು ಕಡಿಮೆಯಾಗಿ ಸೊಂಪಾಗಿ ಬೆಳೆಯುವುದು.

ವಿಟಮಿನ್ ಇ ಇರುವ 200ಗ್ರಾಂ ಬೆಣ್ಣೆ ಹಣ್ಣು ತಿನ್ನುವುದರಿಂದ ಕೂದಲು ಆರೋಗ್ಯಕರವಾಗಿ ಬೆಳೆಯುವುದು.

ಬೀನ್ಸ್‌ನಲ್ಲಿ ಸತುವಿನಂಶವಿದ್ದು 100ಗ್ರಾಂ ಬೀನ್ಸ್ ತಿಂದರೆ ನಿಮಗೆ ದಿನನಿತ್ಯ ಬೇಕಾಗುವ ಸತುವಿನಲ್ಲಿ ಶೇ. 7ರಷ್ಟು ಲಭ್ಯವಾಗುತ್ತದೆ.

ಮೊಟ್ಟೆಯಲ್ಲಿ ಪ್ರೊಟೀನ್ ಹಾಗೂ ಬಯೋಟಿನ್ ಅಂಶವಿರುವುದರಿಂದಕೂದಲಿನ ಆರೋಗ್ಯಕ್ಕೆ ತುಂಬಾಒಳ್ಳೆಯದು. ದೇಹದಲ್ಲಿ ಪ್ರೊಟೀನ್ ಅಂಶ ಕಡಿಮೆಯಾದರೆ ಕೂದಲು ಉದುರುವ ಸಮಸ್ಯೆ ಕಂಡು ಬರುವುದು. ಇನ್ನು ಇದರಲ್ಲಿರುವ ಬಯೋಟಿನ್ ಕೂದಲುದಪ್ಪವಾಗಿ ಬೆಳೆಯಲು ಸಹಕಾರಿ.

# ಶ್ವಾಸಕೋಶದ ಕ್ಯಾನ್ಸರ್ ಬಗ್ಗೆ ಇರಲಿ ಎಚ್ಚರ



ಇತ್ತೀಚಿನ ದಿನಗಳಲ್ಲಿ ಶ್ವಾಸಕೋಶದ ಕ್ಯಾನ್ಸರ್ ಸಮಸ್ಯೆ ಉಲ್ಬಣಗೊಳ್ಳುತ್ತಿದೆ.ಅದರಲ್ಲೂ ಮಹಿಳೆಯರಲ್ಲಿ ದಿನೇ ದಿನೇ ಶ್ವಾಸಕೋಶದ ಕ್ಯಾನ್ಸರ್ ಸಮಸ್ಯೆ ವೃದ್ಧಿಯಾಗುತ್ತಿದೆ ಎಂಬುದನ್ನು ಇನ್ನಷ್ಟು ಆತಂಕ ಹುಟ್ಟಿಸಿದೆ.

ತಜ್ಞರ ಪ್ರಕಾರ,ತೂಕನಷ್ಟ,ಕಫಉತ್ಪತ್ತಿ, ಕಫದೊಂದಿಗೆ ರಕ್ತಬರುವುದು ಶ್ವಾಸಕೋಶದ ಕ್ಯಾನ್ಸರ್ ಕೆಲವು ಪ್ರಮುಖ ಲಕ್ಷಣಗಳು. ಕ್ಯಾನ್ಸರ್ ಶ್ವಾಸಕೋಶಗಳಿಂದ ಹರಡಿದರೆ, ಅದು ಯಕೃತ್ತನ್ನು ಸೇರಿ ಕಾಮಾಲೆ ರೋಗಕ್ಕೆ ಕಾರಣವಾಗುತ್ತದೆ, ಅಡ್ರಿನಲ್ ಗ್ರಂಥಿಗಳಿಗೆ ಸೇರಿದರೆ ಅವು ವೈಫಲ್ಯ ಅನುಭವಿಸುತ್ತವೆ. ಇದರಿಂದ ರಕ್ತದೊತ್ತಡ ಕುಸಿತದಂತಹ ತುರ್ತು ಸ್ಥಿತಿಯನ್ನು ತಂದೊಡ್ಡುತ್ತದೆ. ಎಲುಬುಗಳಲ್ಲಿನೋವು ಮತ್ತು ಮುರಿತಉಂಟಾಗುತ್ತದೆ.ಕ್ಯಾನ್ಸರ್ ಮೆದುಳನ್ನು ತಲುಪಿದಾಗ ಪಾರ್ಶ್ವವಾಯು ಅಥವಾ ಸೆಳವು ಉಂಟಾಗುತ್ತದೆ.

ಕೈಗಾರಿಕೆಗಳು, ಗಣಿಗಾರಿ–ಕೆ ವಲಯಗಳಲ್ಲಿ ಕೆಲಸ ಮಾಡುವಂತಹ ಔದ್ಯೋಗಿಕ ಅಂಶಗಳ ಹೊರತಾಗಿ, ಸಿಗರೆಟ್‌ಗಳಸೇವನೆ, ತಂಬಾಕು ಜಗಿಯುವುದು,ಖೇಣಿ, ಹುಕ್ಕಾ, ತಂಬಾಕಿನ ಜತೆಗೆ ವೀಳ್ಯದೆಲೆ ತಿನ್ನುವುದು, ಹಿಮ್ಮುಖ ಧೂಮಪಾನ, ಅಡುಗೆಮನೆಯ ಹೊಗೆ ಮತ್ತು ವಾಹನಗಳ ಮಾಲಿನ್ಯ ಮುಂತಾದವು ಶ್ವಾಸಕೋಶದ ಕ್ಯಾನ್ಸರ್‌ಗೆ ಮುಖ್ಯ ಕಾರಣಗಳಾಗಿವೆ. ಮುಂದಿನ ಕೆಲವು ವರ್ಷಗಳಲ್ಲಿ ತಂಬಾಕು–ಸಂಬಂಧಿಮಾರಕ ರೋಗಗಳ ಹೊರೆಭಾರತದಲ್ಲಿ 12 ಪ್ರತಿಶತಕ್ಕೆ ಏರಿಕೆಯಾಗುವ ನಿರೀಕ್ಷೆಯಿದೆ.

ವಿಶ್ವಶ್ವಾಸಕೋಶದ ಕ್ಯಾನ್ಸರ್ ದಿನಕ್ಕೆ ಪೂರ್ವಭಾವಿಯಾಗಿ, ನ್ಯೂಬರ್ಗ್ ಸೆಂಟರ್ ಫಾರ್ ಜೀನೋಮಿಕ್ ಮೆಡಿಸಿನ್ ಆಯೋಜಿಸಿದ್ದ ಪ್ಯಾನಲ್‌ನಲ್ಲಿ ಶ್ವಾಸಕೋಶದ ಕ್ಯಾನ್ಸರ್ ತಜ್ಞರು'ಶ್ವಾಸಕೋಶದ ಕ್ಯಾನ್ಸರ್ ಪತ್ತೆ?ಎಷ್ಟು ತಡವಾಗಿ ತಡವಾಗಿಯೇ ಎಂಬುದಕ್ಕೆ ಸಂಬಂಧಿಸಿನಡೆಸಿದಚರ್ಚೆಯಲ್ಲಿ,

ಇತ್ತೀಚೆಗೆ, ಹೆಚ್ಚಿನ ಸಂಖ್ಯೆಯ ಮಹಿಳೆಯರು ಶ್ವಾಸಕೋಶದ ಕ್ಯಾನ್ಸರ್ ಪ್ರಕರಣಗಳನ್ನು ವರದಿ ಮಾಡುತ್ತಿದ್ದಾರೆ ಎಂಬಮಾಹಿತಿ ಹಂಚಿಕೊಂಡಿದ್ದಾರೆ.ಬಹುತೇಕ ಸಂದರ್ಭಗಳಲ್ಲಿ ಆರಂಭಿಕ ಹಂತಗಳಲ್ಲಿ ಕ್ಯಾನ್ಸರನ್ನು ಕ್ಷಯವೆಂದು ತಪ್ಪಾಗಿ ಅರ್ಥ ಮಾಡಿಕೊಳ್ಳಲಾಗುತ್ತದೆ.ಎರಡರ ರೋಗಲಕ್ಷಣಗಳೂ ಬಹುತೇಕ ಒಂದೇ ರೀತಿ ಇರುವುದು ಇದಕ್ಕೆ ಕಾರಣ. ಎರಡೂ ಪ್ರಕರಣಗಳಲ್ಲಿ, ರೋಗಿಯು ಕೆಮ್ಮು ಹಾಗೂ ಅಥವಾ ರಕ್ತ ಸಹಿತವಾದ ಕೆಮ್ಮನ್ನು ಹೊಂದಿರುತ್ತಾರೆ.ಧೂಮಪಾನವು ಶ್ವಾಸಕೋಶದ ಕ್ಯಾನ್ಸರ್ ಪ್ರಮುಖ ಕಾರಣವಾಗಿದೆ. ಧೂಮಪಾನಿಗಳು ಹಾಗೂ ಧೂಮಪಾನಿಗಳಲ್ಲದವರಲ್ಲಿ ಶ್ವಾಸಕೋಶದ ಕ್ಯಾನ್ಸರ್ ಉಂಟಾಗುವ ಅಪಾಯವು 20:1ರಷ್ಟಿರುತ್ತದೆ.

ಧೂಮಪಾನಿಗೆ ಹೋಲಿಸಿದರೆ ನಿಷ್ಕ್ರಿಯ ಧೂಮಪಾನಿ ಕ್ಯಾನ್ಸರ್‌ಗೆ ತುತ್ತಾಗುವ ಸಾಧ್ಯತೆ ಸಮನಾಗಿರುತ್ತದೆ ಅಥವಾ ಹೆಚ್ಚಾಗಿರುತ್ತದೆ. ಆರಂಭಿಕ ಹಂತದಲ್ಲಿ ರೋಗಿಗಳನ್ನು ಗುಣಪಡಿಸಲು, ಶಸ್ತ್ರಚಿಕಿತ್ಸೆಯು ತುಂಬ ಮುಖ್ಯವಾದ ವಿಧಾನವಾಗಿದ್ದು, ಆ ಬಳಿಕ ವಿಕಿರಣ ನೀಡಲಾಗುತ್ತದೆ. ಚಿಕಿತ್ಸೆಯನ್ನು

ಈಗ ಹೆಚ್ಚು ಸುಧಾರಿತ ಚಿಕಿತ್ಸಾ ವಿಧಾನಗಳಾದ ಉದ್ದೇಶಿತ ಚಿಕಿತ್ಸೆ ಮತ್ತು ಇಮ್ಯುನೊಥೆರಪಿ ಆಯ್ಕೆಗಳು ಲಭ್ಯವಿವೆ. ಇವು ಜೀವಿತಾವಧಿಯನ್ನು ಹೆಚ್ಚಿಸುತ್ತವೆ ಮತ್ತು ಉತ್ತಮ ಗುಣಮಟ್ಟದ ಜೀವನಕ್ಕೆ ಕಾರಣವಾಗುತ್ತವೆ. ಕೀಮೋಥೆರಪಿಗೆ ಹೋಲಿಸಿದರೆ ಉದ್ದೇಶಿತ ಚಿಕಿತ್ಸೆ ಮತ್ತು ಇಮ್ಯುನೋಥೆರಪಿಗಳು ತುಂಬ ಕಡಿಮೆ ಅಡ್ಡ ಪರಿಣಾಮಗಳನ್ನು ಹೊಂದಿವೆ. ಉತ್ತಮ ಬದುಕುಳಿಯುವಿಕೆಯ ದರಗಳಿಗೆ ಕಾರಣವಾಗುವ ಚಿಕಿತ್ಸೆಯ ಆಯ್ಕೆಗಳನ್ನು ನಿರ್ಧರಿಸುವಲ್ಲಿ ಜೆನೆಟಿಕ್ ಪರೀಕ್ಷೆಯು ವರದಾನವಾಗಿದೆ

ಯುವ ಮಾರ್ಗ

ಗುರುವಾರ : 31–07–2025

# ಕಂದಾಯ ಗ್ರಾಮ ರಚನೆಗೆ ಅರ್ಜಿ ಆಹ್ವಾನ

**ರಾಯಚೂರು,ಜು.30–**ಖಾಸಗಿ ಜಮೀನುಗಳಲ್ಲಿ ನೆಲೆಸಿರುವ ದಾಖಲೆ ರಹಿತ ಜನವಸತಿಗಳನ್ನು ಕಂದಾಯ ಗ್ರಾಮ ಅಥವಾ ಗ್ರಾಮದ ಭಾಗವಾಗಿ ಪರಿವರ್ತಿಸಿ ಅಲ್ಲಿಯ ನಿವಾಸಿಗಳಿಗೆ ಹಕ್ಕು ಪತ್ರ ನೀಡುವ ಕುರಿತು ಮಾನ್ಯ ಸರ್ಕಾರದ ಆದೇಶವಿದ್ದು, ಅದರಂತೆ ಜಿಲ್ಲೆಯಲ್ಲಿನ ಅರ್ಹ ಪ್ರಕರಣಗಳಲ್ಲಿ ಕಂದಾಯ ಗ್ರಾಮ ಮತ್ತು ಉಪ ಗ್ರಾಮಗಳನ್ನು ರಚನೆ ಮಾಡಲಾಗುತ್ತಿದ್ದು, ಜಿಲ್ಲೆಯ ಸಾರ್ವಜನಿಕರು ಅರ್ಹತೆ ಹೊಂದಿದಲ್ಲಿ ಸಂಬಂಧಿಸಿದ ತಾಲೂಕು ಕಾರ್ಯಾಲಯಗಳಲ್ಲಿ ಅರ್ಜಿ ಸಲ್ಲಿಸಬಹುದಾಗಿರುತ್ತದೆ ಎಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹಸಿರು ಮೆಣಸಿನಕಾಯಿ, ದಾಳಿಂಬೆ, ಮಾವು ಬೆಳೆವಿಮೆಗೆ ಅರ್ಜಿ

**ರಾಯಚೂರು,ಜು.30–**ಸರ್ಕಾರದ ನಡುವಳಿಯಂತೆ ಮರು ವಿನ್ಯಾಸಗೊಳಿಸಿದ ಹವಾಮಾನ ಅಧಾರಿತ ಬೆಳೆ ವಿಮೆ ಯೋಜನೆ 2025ರ ಮುಂಗಾರು ಹಂಗಾಮಿನಲ್ಲಿ ಜಿಲ್ಲೆಯ ಅಧಿಸೂಚಿತ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಬರುವ ನೀರಾವರಿ ಪ್ರದೇಶದ ಹಸಿ ಮೆಣಸಿನಕಾಯಿ ದಾಳಿಂಬೆ ಮತ್ತು ಮಾವು ಬೆಳೆಗೆ ವಿಮಾ ಮಾಡಿಸಲು ಅರ್ಹ ರೈತರಿಂದ ಅರ್ಜಿ ಆಹ್ವಾನಿಸಲಾಗಿದೆ.

ಹಸಿ ಮೆಣಸಿನಕಾಯಿ(ನೀರಾವರಿ.) ಬೆಳೆಗೆ ಪ್ರತಿ ಹೆಕ್ಟರ್ ವಿಮಾ ಮೊತ್ತ 71000 ರೂ ಗಳಿದ್ದು, ವಿಮಾ ಕಂತಿನ ಮೊತ್ತ 3550 ರೂ. ಗಳಿರುತ್ತದೆ. ದಾಳಿಂಬೆ ಬೆಳೆಗೆ ಪ್ರತಿ ಹೆಕ್ಟರ್‌ಗೆ ವಿಮಾ ಮೊತ್ತ 127000 ರೂ. ಗಳಾಗಿದ್ದು, ವಿಮಾ ಕಂತಿನ ಮೊತ್ತ 6350 ರೂ ಗಳಿರುತ್ತದೆ ಮತ್ತು ಮಾವು ಬೆಳೆಗಾರರಿಗೆ ಪ್ರತಿ ಹೆಕ್ಟರ್‌ಗೆ ವಿಮಾ ಮೊತ್ತ 80000 ರೂ.ಗಳಾಗಿದ್ದು, ವಿಮಾ ಕಂತಿನ ಮೊತ್ತ 4000 ರೂ, ಗಳಿರುತ್ತದೆ.

ಬೆಳೆ ಸಾಲ ಪಡೆದಿರುವ ಮತ್ತು ಪಡೆಯದ ರೈತರು ವಿಮೆ ಕಂತು ಕಟ್ಟಲು ಹತ್ತಿರದ ರಾಷ್ಟ್ರೀಕೃತ ಬ್ಯಾಂಕುಗಳಿಗೆ ಅಥವಾ ಹತ್ತಿರದ ಕಂಪ್ಯೂಟರ್ ಸೇವಾ ಕೇಂದ್ರಗಳಲ್ಲಿ ನಿಗಧಿತ ಅರ್ಜಿಗಳೊಂದಿಗೆ ಭೂ ದಾಖಲೆಗಳಾದ ಪಹಣಿ, ಬ್ಯಾಂಕ್ ಪಾಸ ಪುಸ್ತಕ, ಆಧಾರ್ ಕಾರ್ಡ ಮತ್ತು ಸ್ವಯಂ ಘೋಷಿತ ಬೆಳೆ ವಿವರಗಳೊಂದಿಗೆ ಆಗಸ್ಟ್ 11ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಆಯಾ ತಾಲ್ಲೂಕು ತೋಟಗಾರಿಕೆ ಇಲಾಖೆ ಅಥವಾ ಸಮೀಪದ ರೈತ ಸಂಪರ್ಕ ಕೇಂದ್ರ ಹಾಗೂ ಸಮೀಪದ ಯಾವುದೇ ಬ್ಯಾಂಕ್‌ಗಳಿಗೆ, ಸಿಎಸ್‌ಸಿ ಕೇಂದ್ರಗಳಿಗೆ ಹಾಗೂ ಗ್ರಾಮ ಒನ್ ಕೇಂದ್ರಗಳಿಗೆ ಬೇಟಿ ನೀಡಿ ಯೋಜನೆಯಡಿ ಆಯ್ಕೆಯಾಗಿರುವ ಗ್ರಾಮ ಪಂಚಾಯತ ಮತ್ತು ಬೆಳೆಗಳ ಬಗ್ಗೆ ಮಾಹಿತಿ ಪಡೆದುಕೊಂಡು ವಿಮೆಗಾಗಿ ಅರ್ಜಿ ಸಲ್ಲಿಸುವಂತೆ ರೈತ ಬಾಂದವರಲ್ಲಿ ತೋಟಗಾರಿಕೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸರ್ಕಾರಿ ಶಾಲೆಯ ಮಕ್ಕಳಿಗೆ ಸುಸಜ್ಜಿತ ಕೋಣೆಗಳಲ್ಲಿ ಪಾಠ

**ಭಾಲ್ಕಿ,ಜು.30–** ತಾಲೂಕಿನ ಮಳಚಾಪೂರ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಸುಸಜ್ಜಿತ ಕೋಣೆಗಳಲ್ಲಿ ಮಕ್ಕಳಿಗೆ ಪಾಠ ನಡೆಸಲಾಗುತ್ತಿದೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಸಿ.ಜಿ.ಹಳ್ಳದ್ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ಹೊರಡಿಸಿದ ಅವರು, ಮಳಚಾಪೂರ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಶಿಥಿಲಾವಸ್ಥೆ ಕಟ್ಟಡದ ಸೋರುತ್ತಿರುವ ಕೋಣೆಗಳಲ್ಲಿ ಪಾಠ ಮಾಡಲಾಗುತ್ತಿದೆ ಎಂದು ಅಪ ಪ್ರಚಾರ ಮಾಡಲಾಗುತ್ತಿದೆ. ಇದು ಸತ್ಯಕ್ಕೆ ದೂರವಾಗಿದೆ. ಈಗಾಗಲೆ ಕ್ಷೇತ್ರದ ಶಾಸಕರೂ ಆದ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆಯವರು ಶಾಲೆಗೆ ಹೆಚ್ಚುವರಿ ಕೋಣೆಗಳನ್ನು ಮಂಜೂರು ಮಾಡಿದ್ದಾರೆ. ಕೆಕೆಆರ್‌ಡಿಬಿ ಅನುದಾನದ ಅಡಿಯಲ್ಲಿ ಮಳಚಾಪುರ ಶಾಲೆಗೆ ಹೊಸದಾಗಿ 4 ಕೋಣೆಗಳ ಕಾಮಗಾರಿ ನಡೆಯುತ್ತಲಿದೆ. ಪ್ರಸ್ತುತ ಶಾಲೆಯಲ್ಲಿ ಸುಸ್ಥಿರವಾದ ಕೋಣೆಗಳಲ್ಲಿಯೇ ಮಕ್ಕಳಿಗೆ ಪಾಠ ಮಾಡಲಾಗುತ್ತಿದೆ. ಹೀಗಾಗಿ ಅಪಪ್ರಚಾರಕ್ಕೆ ಯಾರೂ ಮಣೆ ಹಾಕಬಾರದು.

ಅಲ್ಲದೇ ಶಾಲಾ ಶಿಕ್ಷಣ ಇಲಾಖೆಯ ಆಯುಕ್ತರ ಸುತ್ತೋಲೆಯ ಪ್ರಕಾರ ಮಳೆ ಬರುವ ಸಂದರ್ಭದಲ್ಲಿ ಶಾಲೆಗಳಲ್ಲಿ ಕೈಗೊಳ್ಳಬೇಕಾದ ಅಗತ್ಯ ಮುನ್ನೆಚ್ಚರಿಕಾ ಕ್ರಮಗಳ ಮಾರ್ಗಸೂಚಿಯನ್ನು ತಾಲೂಕಿನ ಎಲ್ಲಾ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲಾ ಮುಖ್ಯ ಶಿಕ್ಷಕರಿಗೆ ಅಗತ್ಯ ಕ್ರಮಕ್ಕಾಗಿ ಸೂಚನೆ ನೀಡಲಾಗಿದೆ.

# ಅಕ್ರಮವಾಗಿ ಸೇಂಧಿ ತಯಾರಿಸಿ ಮಾರಾಟ: ಓರ್ವನ ಬಂಧನ

**ಕಲಬುರಗಿ,ಜು.30–**ನಗರದ ವಿಜಯನಗರ ಕಾಲೋನಿಯ ವಾಟರ್ ಪ್ಲಾಂಟ್ ಹತ್ತಿರದ ಸಾರ್ವಜನಿಕ ರಸ್ತೆಯ ಬದಿಯ ಖುಲ್ಲಾ ಜಾಗದಲ್ಲಿ ವ್ಯಕ್ತಿಯೊಬ್ಬ ಅಕ್ರಮವಾಗಿ ಸೇಂಧಿ, ಸರಾಯಿ ತಯಾರಿಸಿ ಮಾರಾಟ ಮಾಡುತ್ತಿದ್ದಾನೆ ಎಂಬ ಮಾಹಿತಿ ಮೇಲೆ ಸಿಸಿಬಿ ಘಟಕದ ಪಿಎಸ್‌ಐ ಶಶಿಕುಮಾರ, ಸಿಬ್ಬಂದಿಗಳಾದ ರವೀಂದ್ರಕುಮಾರ, ಶ್ರೀಶೈಲ, ನಾಗರಾಜ ಅವರು ದಾಳಿ ನಡೆಸಿ ಆಳಂದ ಕಾಲೋನಿಯ ಕನ್ನಯ್ಯ ತಂದೆ ದೇವಪ್ಪ ಚೌದ್ರಿ (51) ಎಂಬಾತನನ್ನು ಬಂಧಿಸಿ 1 ಸಾವಿರ ರೂ.ಮೊತ್ತದ 10 ಲೀಟರ್ ಸೇಂಧಿ, 170 ರೂ.ನಗದು ಜಪ್ತಿ ಮಾಡಿದ್ದಾರೆ. ಚೌಕ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಒತ್ತಡದ ಜೀವನದಲ್ಲಿ ಮಾನಸಿಕ ಅಸ್ವಸ್ಥರಾಗದೆ ಸೂಕ್ತ ಸಲಹೆ ಪಡೆದುಕೊಳ್ಳಿ: ಸುವರ್ಣ

ಯುವ ಮಾರ್ಗ ಸುದ್ದಿ

**ರಾಯಚೂರು, ಜು.31–** ತಾಲೂಕಿನ ಜಾಲಿಬೆಂಚಿ ಗ್ರಾಮದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಹಯೋಗದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ಉಡಮಗಲ್ ಖಾನಾಪೂರ ವ್ಯಾಪ್ತಿಯ ಜಾಲಿಮಿಂಚಿ ಗ್ರಾಮದಲ್ಲಿ ಉಚಿತವಾಗಿ ಮೆಗಾ ಹೆಲ್ತ್ ಕ್ಯಾಂಪಿನಲ್ಲಿ ನೂರಾರು ಜನರಿಗೆ ಹಮ್ಮಿಕೊಂಡಿದ್ದ ಉಚಿತ ಆರೋಗ್ಯ ತಪಾಸಣೆ ಶಿಬಿರದಲ್ಲು ಒತ್ತಡದ ಜೀವನದಲ್ಲಿ ಮಾನಸಿಕ ಅಸ್ವಸ್ತರಾಗದೇ ಸೂಕ್ತ ವೈದ್ಯರಿಂದ ಸಲಹೆ ಚಿಕಿತ್ಸೆ ಪಡೆದುಕೊಳ್ಳಿ ಎಂದು ಸುವರ್ಣ ಹೇಳಿದರು.

ಜಾಲಿಬೆಂಚಿ ಗ್ರಾಮದಲ್ಲಿ ನೂರಾರು ಜನರಿಗೆ ಮಾನಸಿಕ ಆರೋಗ್ಯ ಕುರಿತು ಆಪ್ತ ಸಮಾಲೋಚಕಿ ಸುವರ್ಣ ಅವರು ಒತ್ತಡದ ಧೈನಂದಿನ ಬದುಕಿನಲ್ಲಿ ಮಹಿಳೆಯರು ಯಾವುದೇ ಒತ್ತಡಕ್ಕೆ ಸಮಸ್ಯೆಯಿಂದ ಬಳಲುವ ಬದಲು ಯಾವುದೇ ಮುಜುಗರ ಪಡದೇ ಸೂಕ್ತ ವೈದ್ಯರೊಂದಿಗೆ ತಮ್ಮ ಸಮಸ್ಯೆ ಬಗ್ಗೆ ತಿಳಿಸಿ ಪರಿಹಾರ ಕಂಡುಕೊಳ್ಳುವಲ್ಲಿ ಮುಂದಾಗಬೇಕು,ಮಾನಸಿಕ ಅಸ್ವಸ್ತತೆಯಿಂದ ಹೊರಬರಲು ಸೂಕ್ತ ಸಲಹೆ ನೀಡಿದರು.




ಪಿಪಲ್‌ಟೂಪಿಪಲ್ ಹೆಲ್ತ್ ಫೌಂಡೇಶನ್ ಮತ್ತು ಜಿಈ ಹೆಲ್ತ್ ಕೇರ್‌ವತಿಯಿಂದ ಉಚಿತ ಆರೋಗ್ಯ ತಪಾಸಣೆ ಶಿಬಿರದಲ್ಲಿ ತಜ್ಞವೈದ್ಯರಿಂದ ಕಣ್ಣು ತಪಾಸಣೆ ಹಲ್ಲು ನೋವು ,ಬಿಪಿ,ಶುಗರ್, ಮತ್ತು ಹೆಚ್‌ಬಿ ಪರೀಕ್ಷೆ ಉಚಿತ ಔಷಧಿ ವಿತರಣೆಯನ್ನ ಗ್ರಾಮದ ನೂರಾರು ಮಹಿಳೆಯರು ವಯೋವೃದ್ದರು ತಜ್ಞಾ ವೈದ್ಯರಿಂದ ಚಿಕಿತ್ಸೆ ಪಡೆದು ಇದರ ಸದುಪಯೋಗ ಪಡೆದುಕೊಂಡರು.

ಜಂಕ್ ಫುಡ್ ಸೇವನೆಯಿಂದ ಆಗುವ ಆರೋಗ್ಯ ಸಮಸ್ಯೆಗಳ ಕುರಿತು ಪ್ರೊಜೆಕ್ಟರ್ ಮೂಲಕ ಆರೋಗ್ಯ ಸಮಸ್ಯೆಗಳ ವಿಡಿಯೋ ತುಣುಕುಗಳ ಬಿತ್ತರಿಸುವುದರ ಮೂಲಕ ಜಾಗೃತಿ ಮೂಡಿಸಿದರು. ಈ ಸಂದರ್ಭದಲ್ಲಿ ಡಾ.ಶ್ರೀನಿವಾಸ್ ದಂಥವೈದ್ಯರು ಡಾ. ಜಾನ್ ಮೈಕಲ್ ಕಣ್ಣು ತಪಾಸಣೆ ತಂಡದ ಪ್ರಮುಕರಾದ ಗುರುನಾಥ ,ಸುವರ್ಣ ಮಾನಸಿಕ ಮಾಹಿತಿ ಆಪ್ತ ಸಮಾಲೋಚಕರು, ಪಿಪಿಹೆಚ್‌ಎಫ್‌ನ ಕಾರ್ಯಕ್ರಮ ವ್ಯವಸ್ಥಾಪಕರು ಮಲೈಕಾ ಅಮೀನ್ ,ಹನುಮಂತಪ್ಪ ಸಿಬ್ಬಂಧಿ ನರಸಮ್ಮ ಸಂಧ್ಯಾ, ಆಶಾ ಕಾರ್ಯಕರ್ತೆ ರೇಣುಕಾ,ಅಂಗನವಾಡಿ ಕಾರ್ಯಕರ್ತರು ಮತ್ತು ಸ್ವಯಂಸೇವಕರು ಸೇರಿದಂತೆ ಗ್ರಾಮದ ಇನ್ನಿತರರು ಇದ್ದರು.

# ವೀರಶೈವ ಲಿಂಗಾಯ ಪಂಚಸಾಲಿ ನೌಕರರ ಘಟಕಕ್ಕೆ ಪದಾಧಿಕಾರಿಗಳ ಆಯ್ಕೆ




ಯುವ ಮಾರ್ಗ ಸುದ್ದಿ

**ಲಿಂಗಸುಗೂರು,ಜು.30–** ಲಿಂಗಸುಗೂರು ತಾಲೂಕು ಹಾಗೂ ರಾಯಚೂರು ಜಿಲ್ಲೆಯ ವೀರಶೈವ ಲಿಂಗಾಯತ ಪಂಚಮಸಾಲಿ ಸಮುದಾಯ ಹಾಗೂ ಪಂಚಮಸಾಲಿ ಸಮುದಾಯದ ನೌಕರರ ಸಂಘಕ್ಕೆ ಹೊಸದಾಗಿ ಪದಾಧಿಕಾರಿಗಳ ಆಯ್ಕೆ ಮಾಡಲಾಗಿದೆ.

ದೇವರಾಜ ನಾಡಗೌಡ ಅಧ್ಯಕ್ಷ, ಸಂಗಣ್ಣ ಕೊಮನೂರು ಉಪಾಧ್ಯಕ್ಷ, ಲಿಂಗರಾಜ ಮಾ.ಪಾ. ಪ್ರದಾನ ಕಾರ್ಯದರ್ಶಿ, ಬಸವರಾಜ ಗಸ್ತಿ ಸಂಘಟನಾ ಕಾರ್ಯದರ್ಶಿ, ಖಜಾಂಚಿ ನಾಗಪ್ಪ ಬೋದಾವತ್, ಶರಣಪ್ಪ ಬಂಡಿ ಸಹ ಕಾರ್ಯದರ್ಶಿ ಆಯ್ಕೆ ಮಾಡಲಾಗಿದೆ.

ಮಹಾಂತೇಶ ಪಾಟೀಲ್ ಜಿಲ್ಲಾಧ್ಯಕ್ಷ, ವೀರೇಶ ತೇರೆದಾಳ ಜಿಲ್ಲಾ ನೌಕರರ ಘಟಕದ ಅಧ್ಯಕ್ಷ, ವಿಜಯ ಲಕ್ಷ್ಮೀ ದೇಸಾಯಿ ಮಹಿಳಾ ಘಟಕದ ಜಿಲ್ಲಾಧ್ಯಕ್ಷೆ, ಡಾ.ಸುಭಾಸ್ ಪಲ್ಲೇದ ತಾಲೂಕ ಅಧ್ಯಕ್ಷ, ವಿರೇಶ ಪಾಟೀಲ್ ಯುವ ಘಟಕದ ಅಧ್ಯಕ್ಷ, ದೇವಪುತ್ರ ಸರ್ಜಾಪುರ ಪ್ರದಾನ ಕಾರ್ಯದರ್ಶಿ, ಅಮರೇಗೌಡ ಪಾಟೀಲ್ ಬೆಂಡೋಣಿ ಉಪಾಧ್ಯಕ್ಷ, ವಿಜಯ ಕುಮಾರ ಕಾಳಾಪುರ ಉಪಾಧ್ಯಕ್ಷ, ಸಂಗಪ್ಪ ನಗಿಮುಖದ ಉಪಾಧ್ಯಕ್ಷ, ಅಮರೇಗೌಡ ಕಾರ್ಯದರ್ಶಿ, ಅಮರೇಶ ತಾವರಗೇರೆ ಕಾರ್ಯದರ್ಶಿ, ಶಿವಕುಮಾರ ಎ.ಕಾಳಾಪುರ ಯುವ ಘಟಕದ ಕೋಶಾಧ್ಯಕ್ಷ, ಚಂದ್ರಶೇಖರ ಗೌಡೂರು ಜಿಲ್ಲಾ ಉಪಾಧ್ಯಕ್ಷ, ಶರಣಪ್ಪ ಜಾಲಹಳ್ಳಿ ರೈತ ಘಟಕದ ಅಧ್ಯಕ್ಷ ಆಯ್ಕೆ ಮಾಡಲಾಗಿದೆ.

# ರಸ್ತೆ ಅಭಿವೃದ್ಧಿಪಡಿಸುವ 6.90 ಕೋಟಿ ರೂ.ಕಾಮಗಾರಿಗೆ ಸಚಿವರಿಂದ ಭೂಮಿಪೂಜೆ




**ಬೀದರ, ಜು.30–**ಭಾಲ್ಕಿ ತಾಲೂಕಿನ ಹರಣಾಳ–ಡಾವರಗಾವ್ ಮಾರ್ಗವಾಗಿ ಕುರುಬಖೇಳ್ಗಿ ಗ್ರಾಮದವರೆಗೆ ಸುಮಾರು ರೂ.6.90 ಕೋಟಿ ರೂ. ವೆಚ್ಚದಲ್ಲಿ ರಸ್ತೆಯನ್ನು ಅಭಿವೃದ್ಧಿಪಡಿಸುವ ಕಾಮ ಗಾರಿಗೆ ಇಂದು ಅರಣ್ಯ, ಪರಿಸರ ಹಾಗೂ ಜೀವಿಶಾಸ್ತ್ರ ಸಚಿವರು ಹಾಗೂ ಬಿದರ್ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ.ಖಂಡ್ರೆ ಅವರು ಭೂಮಿಪೂಜೆ ನೆರವೇರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, "ಗ್ರಾಮೀಣ ಭಾಗದ ಜನಜೀವನ ಸುಲಭವಾಗಬೇಕಾದರೆ ಉತ್ತಮ ರಸ್ತೆಗಳ ಅಗತ್ಯವಿದೆ. ಈ ರಸ್ತೆ ಅಭಿವೃದ್ಧಿಯಿಂದ ಈ ಭಾಗದ ಜನರಿಗೆ ಉತ್ತಮ ಸಂಪರ್ಕ ಸೌಲಭ್ಯ ಒದಗಲಿದ್ದು, ಇದು ಶಿಕ್ಷಣ, ಆರೋಗ್ಯ ಹಾಗೂ ಆರ್ಥಿಕ ಚಟುವಟಿಕೆಗಳ ಪ್ರಗತಿಗೆ ಸಹಕಾರಿಯಾಗಲಿದೆ," ಎಂದು ಹೇಳಿದರು.

"ಭಾಲ್ಕಿ ತಾಲೂಕಿನಲ್ಲಿ ರಸ್ತೆ ಅಭಿವೃದ್ಧಿ ಕಾರ್ಯದಲ್ಲಿ ನಿರಂತರ ಬದಲಾವಣೆ ಆಗುತ್ತಿದ್ದು, ಇದನ್ನು ಮತ್ತಷ್ಟು ವೇಗವಾಗಿ ಮುಂದುವರೆಸಲಾಗುವುದು. ಗ್ರಾಮೀಣ ಪ್ರದೇಶಗಳ ಸಂಪರ್ಕ ಸುಧಾರಣೆ ನಮ್ಮ ಪ್ರಾಥಮಿಕ ಗುರಿಯಾಗಿದ್ದು, ಇದಕ್ಕಾಗಿ ಸರ್ಕಾರ ಬದ್ಧವಾಗಿದೆ," ಎಂದರು.

ಈ ಕಾರ್ಯಕ್ರಮದಲ್ಲಿ ಸ್ಥಳೀಯ ಜನಪ್ರತಿನಿಧಿಗಳು, ಅಧಿಕಾರಿಗಳು ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು.

# ಲಿಂಗಾಯತ ಮಹಾಮಠದಿಂದ ಅರ್ಥಪೂರ್ಣ ಬಸವ ಪಂಚಮಿ ಆಚರಣೆ

**ಬೀದರ,ಜು.30–**ಬ್ರಿಮ್ಸ್ ಆಸ್ಪತ್ರೆಯಲ್ಲಿ ಗರ್ಭಿಣಿ ತಾಯಂದಿರು, ಬಾಣಂತಿ ತಾಯಂದಿರು ಮತ್ತು ರೋಗಿಗಳಿಗೆ ಹಣ್ಣು, ಹಾಲು ಮತ್ತು ಪ್ರಸಾದ ಹಂಚುವ ಮೂಲಕ ಲಿಂಗಾಯತ ಮಹಾಮಠದಿಂದ ಬಸವ ಪಂಚಮಿಯನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು. ಲಿಂಗಾಯತ ಮಹಾಮಠದ ಪೂಜ್ಯಶ್ರೀ ಪ್ರಭುದೇವ ಮಹಾಸ್ವಾಮೀಜಿಯವರ ನೇತೃತ್ವದಲ್ಲಿ ಆಸ್ಪತ್ರೆಯ ವಾರ್ಡುಗಳಿಗೆ ತೆರಳಿ ಹಣ್ಣು, ಹಾಲು ಮತ್ತು ಪ್ರಸಾದ ವಿತರಿಸಲಾಯಿತು.




# ಮಾನವ ಕಳ್ಳ ಸಾಗಾಣಿಕೆ ತಡೆಗೆ ಎಲ್ಲಾ ಇಲಾಖೆಗಳು ಒಗ್ಗೂಡಿ ಕೆಲಸ ಮಾಡಲು ಕರೆ



**ಬಳ್ಳಾರಿ,ಜು.30–** ಮಾನವ ಕಳ್ಳ ಸಾಗಾಣಿಕೆ ತಡೆಗೆ ಎಲ್ಲಾ ಇಲಾಖೆಗಳ ಅಧಿಕಾರಿಗಳು ಒಗ್ಗೂಡಿ ಕೆಲಸ ಮಾಡಿದಾಗ ಮಾತ್ರ ಅದನ್ನು ತಡೆಯಲು ಸಾಧ್ಯವಾಗುತ್ತದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ "ಮಾನವ ಕಳ್ಳ ಸಾಗಾಣಿಕೆ ತಡೆ ದಿನಾಚರಣೆ" ನಗರದ ಜಿಲ್ಲಾ ಪಂಚಾಯತ್ ನ ನಜೀರ್ ಸಾಬ್ ಸಭಾಗಂಣದಲ್ಲಿ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ವಿವಿಧ ಸಹಭಾಗೀದಾರರ ಇಲಾಖೆಯ ಅಧಿಕಾರಿಗಳಿಗೆ ಹಾಗೂ ಕಾವಲು ಸಮಿತಿಯ ಸದಸ್ಯರಿಗೆ ಬುಧವಾರ ಏರ್ಪಡಿಸಿದ್ದ ಜಿಲ್ಲಾ ಮಟ್ಟದ ಒಂದು ದಿನದ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಮಾನವನನ್ನು ಕೊಂಡುಕೊಳ್ಳಲು ಕಾನೂನಿನಲ್ಲಿ ಅವಕಾಶವಿಲ್ಲ. ಕಡಿಮೆ ವರ್ಷದ ಮಕ್ಕಳನ್ನು ದುಡ್ಡಿನ ಆಮೀಷ ಒಡ್ಡಿ ಮಾರಾಟ ಮಾಡಲಾಗುತ್ತಿದ್ದು, ಇದು ಕಾನೂನು ಪ್ರಕಾರ ತಪ್ಪು. ಸಮಾಜದಲ್ಲಿ ಇದೀಗ ಮಾನವ ಕಳ್ಳ ಸಾಗಾಣಿಕೆಯು ಬಹುದೊಡ್ಡ ಸಮಸ್ಯೆಯಾಗಿ ಬೆಳೆದಿದ್ದು, ಅದರಲ್ಲೂ ಮಾನವ ಕಳ್ಳ ಸಾಗಾಣಿಕೆಗೆ ಹೆಚ್ಚಾಗಿ ಬಲಿಯಾಗುತ್ತಿರುವವರು ಮಹಿಳೆಯರು ಮತ್ತು ಮಕ್ಕಳು. ಇದರಿಂದ ಎಲ್ಲರೂ ಎಚ್ಚೆತ್ತುಕೊಳ್ಳಬೇಕು ಎಂದರು.

ಬಡತನ, ನಿರುದ್ಯೋಗ, ತಂದೆ–ತಾಯಿಗಳಿಗೆ ವಿದ್ಯಾಭ್ಯಾಸದ ಕೊರತೆ ಇವೆಲ್ಲವೂ ಮಾನವ ಕಳ್ಳ ಸಾಗಾಣಿಕೆಗೆ ದಾರಿಯಾಗುತ್ತದೆ. ಮಹಿಳೆಯರು ಆಮಿಷಗಳಿಗೆ ಬಲಿಯಾಗಿ ಮೋಸ ಹೋಗುವುದನ್ನು ತಡೆಯಬೇಕು. ಮಕ್ಕಳನ್ನು ತುಂಬಾ ಜಾಗೃತೆಯಿಂದ ಬೆಳೆಸಲು ಹೆಚ್ಚು ಅರಿವು ಮೂಡಿಸುವ ಕಾರ್ಯವಾಗಬೇಕು ಎಂದರು.

ಅಂಗನವಾಡಿ ಕೇಂದ್ರ ಮತ್ತು ಶಾಲೆಗಳಲ್ಲಿ ಮಕ್ಕಳು ಗೈರಾಗಿದ್ದಲ್ಲಿ ಹಾಜರಾತಿ ನೀಡಬಾರದು. ಮನೆ ಭೇಟಿ ನೀಡಬೇಕು. ವಾಸ್ತವ ಪರಿಶೀಲಿಸಬೇಕು. ಇದರಿಂದ ಆ ಮಗು ನಾಪತ್ತೆ, ಬಾಲ್ಯವಿವಾಹ, ಬಾಲಕಾರ್ಮಿಕ ಪದ್ಧತಿಯಲ್ಲಿ ತೊಡಗಿಕೊಂಡಿದೆ ಎಂಬುದು ಪತ್ತೆಯಾಗುತ್ತದೆ. ಮಗು ಗೈರಾಗಿದ್ದು, ಹಾಜರಾತಿ ನೀಡಿದಲ್ಲಿ ಆ ದಿನ ಆ ಮಗು ಕಾಣೆಯಾಗಿದ್ದಲ್ಲಿ ಅಥವಾ ಬಾಲ್ಯವಿವಾಹದಂತಹ ಘಟನೆ ಸಂಭವಿಸಿದಲ್ಲಿ ನೀವೇ ಜವಾಬ್ದಾರರಾಗುತ್ತೀರಿ ಎಂದು ಅಂಗನವಾಡಿ ಕಾರ್ಯಕರ್ತೆಯರಿಗೆ ಎಚ್ಚರಿಸಿದರು.

ಮಕ್ಕಳಿಗೆ ಕಾನೂನಿನಾತ್ಮಕ ಸೌಲಭ್ಯಗಳನ್ನು ದೊರಕಿಸಿಕೊಟ್ಟಾಗಾ ಮಗುವು ಬಲಿಷ್ಠವಾಗಿ ಬೆಳೆಯುತ್ತದೆ ಹಾಗೂ ದೇಶವು ಸುಭೀಷ್ಠ ರಾಷ್ಟ್ರವಾಗಿ ಬೆಳೆಯಲಿದೆ ಎಂದು ತಿಳಿಸಿದರು.

ಜಿಲ್ಲಾ ಪಂಚಾಯತ್‌ನ ಉಪ ಕಾರ್ಯದರ್ಶಿ ಶಶಿಕಾಂತ ಶಿವಪೂರೆ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, ಸಮಾಜದಲ್ಲಿನ ಅಪ್ರಾಪ್ತ ಮಕ್ಕಳು, ಮಹಿಳೆಯರು ಸೇರಿದಂತೆ ವ್ಯಕ್ತಿಗಳನ್ನು ಕಳ್ಳ ಸಾಗಾಣಿಕೆ ಮಾಡಿ ಲೈಂಗಿಕ ಶೋಷಣೆ, ಭಿಕ್ಷಾಟನೆ, ಜೀತ, ಬಾಲ ಕಾರ್ಮಿಕರ ಕೆಲಸ, ಅಂಗಾಂಗ ಕಸಿ, ಬಾಲ್ಯ ವಿವಾಹ ಮತ್ತು ವೇಶ್ಯೆವಾಟಿಕೆ ಚಟುವಟಿಕೆಗಳಲ್ಲಿ ಬಳಸಿಕೊಳ್ಳಲಾಗುತ್ತಿದ್ದು, ಈ ಕುರಿತು ಸಾರ್ವಜನಿಕರಲ್ಲಿ ಕಾನೂನು ಮತ್ತು ಶಿಕ್ಷೆ ಬಗ್ಗೆ ಜಾಗೃತಿ ಮೂಡಿಸಿ ಸಂಪೂರ್ಣವಾಗಿ ನಿರ್ಮೂಲನೆಯಾಗಿಸಲು ಅಧಿಕಾರಿಗಳು ಕಾರ್ಯನಿರ್ವಹಿಸಬೇಕಿದೆ ಎಂದು ಹೇಳಿದರು.

# ಮನೆ ಬೀಗ ಮುರಿದು 4.74 ಲಕ್ಷ ರೂ.ಮೌಲ್ಯದ ನಗನಾಣ್ಯ ಕಳವು

**ಕಲಬುರಗಿ,ಜು.30–**ಮನೆ ಬೀಗ ಮುರಿದು 4.74 ಲಕ್ಷ ರೂ.ಮೌಲ್ಯದ ನಗನಾಣ್ಯ ಕಳವು ಮಾಡಿರುವ ಘಟನೆ ಕೋಟನೂರ (ಡಿ) ಗ್ರಾಮದ ಬಿ.ಎಸ್.ಎನ್.ಎಲ್.ಲೇಔಟ್ ಹತ್ತಿರ ನಡೆದಿದೆ.

ಹಾಗರಗುಂಡಗಿಯ ಕೋ–ಆಪರೇಟಿವ್ ಸೊಸೈಟಿಯಲ್ಲಿ ಕಾರ್ಯದರ್ಶಿಯಾಗಿರುವ ಸಿದ್ರಾಮರೆಡ್ಡಿ ಎಂಬುವವರ ಮನೆ ಬೀಗ ಮುರಿದು ಕಳ್ಳರು 3 ಲಕ್ಷ ರೂ.ನಗದು, 60 ಸಾವಿರ ರೂ.ಮೌಲ್ಯದ 10 ಗ್ರಾಂ.ಬಂಗಾರದ ಒಂದು ಜೊತೆ ಕಿವಿಯೋಲೆ, 36 ಸಾವಿರ ರೂ.ಮೌಲ್ಯದ 6 ಗ್ರಾಂ.ಬಂಗಾರದ ಎರಡು ಉಂಗುರ, 47 ಸಾವಿರ ರೂ.ಮೌಲ್ಯದ 7 ಗ್ರಾಂ.ಬಂಗಾರದ ಹರಳಿನ ಉಂಗುರ, 36 ಸಾವಿರ ರೂ.ಮೌಲ್ಯದ 6 ಗ್ರಾಂ.ಬಂಗಾರದ ಕಿವಿಯೋಲೆ ಸೇರಿದಂತೆ 4.74 ಲಕ್ಷ ರೂ.ಮೌಲ್ಯದ ನಗನಾಣ್ಯ ಕಳವು ಮಾಡಿದ್ದಾರೆ.

ಇವರು ನಾಗರ ಪಂಚಮಿ ಹಬ್ಬದ ನಿಮಿತ್ಯ ಮನೆಗೆ ಬೀಗ ಹಾಕಿಕೊಂಡು ಪತ್ನಿ ಮತ್ತು ಮಕ್ಕಳೊಂದಿಗೆ ಸ್ವಗ್ರಾಮ ಕೌಲಗ (ಕೆ) ಗ್ರಾಮಕ್ಕೆ ಹೋದ ವೇಳೆ ಮನೆ ಕಳ್ಳತನವಾಗಿದೆ ಎಂದು ತಿಳಿದುಬಂದಿದೆ. ಗೊಬ್ಬರ ಖರೀದಿಗಾಗಿ ಕೋ–ಆಪರೇಟಿವ್ ಸೊಸೈಟಿಯ 3 ಲಕ್ಷ ನಗದನ್ನು ಮನೆಯಲ್ಲಿ ಇಟ್ಟಿದ್ದರು ಎಂದು ತಿಳಿದುಬಂದಿದೆ.

ವಿಶ್ವವಿದ್ಯಾಲಯ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ನಡೆದಿದೆ.

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H